ವಿಶ್ವವಾಣಿ
ವಿಶ್ವಾಸವೇ ವಿಶ್ವ

ರಾಜ್ಯಕ್ಕೆ ಕರುಣ್ ಸವಾಲು
7 ಇನ್ನಿಂಗ್ಸ್ 5 ಶತಕ 752 ರನ್

ಸೆಮಿಫೈನಲ್ ಪಂದ್ಯದಲ್ಲೂ 88 ರನ್ ಗಳಿಸಿದ ರಾಜ್ಯದ ಮಾಜಿ ಆಟಗಾರ ಕರುಣ್ ನಾಯರ್ ಹಜಾರೆ ಟ್ರೋಫಿ ಫೈನಲ್‌ನಲ್ಲಿ ಕರ್ನಾಟಕ ವಿರುದ್ಧ ವಿದರ್ಭ ತಂಡವನ್ನು ಮುನ್ನಡೆಸಲಿದ್ದಾರೆ. ಈ ಮೂಲಕ ತಮ್ಮನ್ನು ರಣಜಿಯಿಂದ ಕೈಬಿಟ್ಟ ರಾಜ್ಯ ತಂಡಕ್ಕೆ ತಿರುಗೇಟು ನೀಡಲು ಸಜ್ಜಾಗಿದ್ದಾರೆ.

ಪುಟ ತೆರೆದಂತೆ...

ನಮ್ಮಷ್ಟಕ್ಕೆ ನಾವೇ ಮಾತನಾಡಿಕೊಳ್ಳುವುದು ಹುಚ್ಚೇ?
ಶಿಶಿರ ಕಾಲ
ಶಿಶಿರ್ ಹೆಗಡೆ
ಸಂ.ಪುಟ | 6

ಹವ್ಯಕ ಸಂಸ್ಕೃತಿಯ ಒಳನೋಟಗಳು
ಹವ್ಯಕುಟುಂಬಿ
ಡಾ.ಆರ್.ಜಿ.ಹೆಗಡೆ
ಸಂ.ಗಮ | 7

ಮಾತಂದ್ರೆ ಮಾತು

ಕೃಷಿ ಕ್ಷೇತ್ರಕ್ಕೆ ನೀಡುವ ಯಾವುದೇ ಸಬ್ಸಿಡಿ ನೇರವಾಗಿ ರೈತರಿಗೆ ತಲುಪಬೇಕು. ರೈತರ ಸಂಕಷ್ಟ ತುರ್ತು ರಾಷ್ಟ್ರೀಯ ಗಮನ ಸೆಳೆಯುತ್ತದೆ. ರೈತರ ಕಾಳಜಿಯನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ. ರೈತರಿಗೆ ಆರ್ಥಿಕ ಭದ್ರತೆ ಬೇಕು. ಕಾಲಮಿತಿಯಲ್ಲಿ ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದು ಅಗತ್ಯವಾಗಿದೆ. ಸಕಾರಾತ್ಮಕ ಮನಸ್ಸಿನೊಂದಿಗೆ ಪರಿಹಾರ ಕಂಡುಕೊಳ್ಳಲು ಪ್ರತಿಯೊಬ್ಬರು ಒಗ್ಗಟ್ಟಿನಿಂದ ಶ್ರಮಿಸಬೇಕಾಗಿದೆ.

ಜಗದೀಪ್ ಧನ್‌ಕರ್
ಉಪರಾಷ್ಟ್ರಪತಿ

ದಾರಿದೀಪೋಕ್ತಿ

ಪರಿಸ್ಥಿತಿ ನಿಮ್ಮ ಪರವಾಗಿ ಇಲ್ಲದ ಸಮಯದಲ್ಲೂ ಮನಸ್ಸಿನ ಶಾಂತಿ ಮತ್ತು ಸಹನೆಯನ್ನು ಕಳೆದುಕೊಳ್ಳದೇ ಸಮಚಿತ್ತದಿಂದ ವರ್ತಿಸುವುದು ಅತ್ಯಂತ ಬಲಿಷ್ಠ ವ್ಯಕ್ತಿಯ ದೊಡ್ಡ ಸಾಮರ್ಥ್ಯ. ಈ ಗುಣವನ್ನು ಬೆಳೆಸಿಕೊಂಡರೆ, ಎಂಥ ಸನ್ನಿವೇಶವನ್ನಾದರೂ ಎದುರಿಸಬಹುದು.

ವಕ್ರತುಂಡೋಕ್ತಿ

ಯಾವುದೇ ಕೆಲಸವನ್ನಾದರೂ ಕೊನೇಕ್ಷಣದಲ್ಲಿ ಮಾಡುವ ಒಂದು ಪ್ರಯೋಜನವೆಂದರೆ ಅದನ್ನು ಅತ್ಯಂತ ಶೀಘ್ರವಾಗಿ ಮಾಡಿ ಮುಗಿಸಬಹುದು.

ಹೈಕಮಾಂಡ್ ವಿರುದ್ಧವೇ ಸಡ್ಡು ಹೊಡೆದ ರಾಜಣ್ಣ, ಜಾರಕಿಹೊಳಿ
ಕೆಪಿಸಿಸಿ ಅಧ್ಯಕ್ಷತೆ ಬೇಕಿದ್ದರೆ ಹೈಕಮಾಂಡ್‌ಗೆ ದೂರು ನೀಡಲಿ: ಡಿಕೆಶಿ

ಕೈ ಕದನಕ್ಕಿಲ್ಲ ವಿರಾಮ

ಬೆಂಗಳೂರು: ರಾಜ್ಯ ಕಾಂಗ್ರೆಸ್‌ನಲ್ಲಿ ಭುಗಿಲೆದ್ದಿರುವ ಬಂಡಾಯಕ್ಕೆ ಕೊನೆಯಿಲ್ಲವಾಗಿದೆ. ಅಧಿಕಾರ ಹಸ್ತಾಂತರ, ಅಧ್ಯಕ್ಷರ ಬದಲಾವಣೆಗೆ ಸಂಬಂಧಿಸಿದಂತೆ ಯಾರೂ ಮಾತನಾಡದಂತೆ ಸರಣಿ ಎಚ್ಚರಿಕೆಯ ನಡುವೆಯೂ ಕೆಲ ಸಚಿವರು ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ಪಟ್ಟುಹಿಡಿದಿರುವುದು ವಿವಾದವನ್ನು ಮತ್ತಷ್ಟು ಜಟಿಲಗೊಳಿಸಿದೆ.

ಕಳೆದ 15 ದಿನಗಳಿಂದ ನಡೆಯುತ್ತಿರುವ ಪ್ರಸಹನಕ್ಕೆ ಸಂಬಂಧಿಸಿದಂತೆ ಮೊದಲ ಬಾರಿಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ 'ಕೆಪಿಸಿಸಿ ಅಧ್ಯಕ್ಷ ಸ್ಥಾನ ಅಂಗಡಿ ಅಥವಾ ಮಾಧ್ಯಮಗಳ ಮುಂದೆ ಸಿಗುವುದಿಲ್ಲ' ಎಂದು ಅಸಮಾಧಾನ ಹೊರಹಾಕಿದ್ದಾರೆ. ಆದರೆ ಇನ್ನೊಂದೆಡೆ ಗೃಹ ಸಚಿವ ಪರಮೇಶ್ವರ ಸಚಿವ ಸ್ಥಾನ ಅಥವಾ ಕೆಪಿಸಿಸಿ ಅಧ್ಯಕ್ಷ ಸ್ಥಾನ ಎರಡನ್ನೂ ನಿಭಾಯಿಸುವುದು ಪ್ರಯಾಸದ ಕೆಲಸ. ಆದ್ದರಿಂದ ಯಾವುದಾದರೂ ಒಂದನ್ನು ಆಯ್ಕೆ ಮಾಡಿಕೊಳ್ಳುವುದು ಉತ್ತಮ ಎನ್ನುವ ಪರೋಕ್ಷವಾಗಿ ತಿರುಗೇಟು ಕೊಟ್ಟಿದ್ದಾರೆ. ಈ ನಡುವೆ ಸತೀಶ್ ಜಾರಕಿಹೊಳಿ ಅವರು ತಮ್ಮ ವಾದವನ್ನು ಮುಂದುವರಿಸಿದ್ದಾರೆ. ಈ ಎಲ್ಲ ಗೊಂದಲಗಳ ನಿವಾರಣೆಗೆ ಕಾಂಗ್ರೆಸ್ ಮತ್ತೊಂದು 'ಸಂಧಾನ' ಸಭೆಗೆ ವೇದಿಕೆ ಸಿದ್ಧಪಡಿಸಿ ದ್ದಾರೆ. ಗಾಂಧಿ ಭಾರತ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಪೂರ್ವಭಾವಿ ಸಭೆ ನಡೆಸಲು ಬೆಳಗಾವಿಗೆ ಆಗಮಿಸುತ್ತಿರುವ ರಣದೀಪ್ ಸಿಂಗ್ ಸುರ್ಜೇವಾಲ, ಡಿ.ಕೆ.ಶಿವಕುಮಾರ್ ಹಾಗೂ ಸತೀಶ್ ಜಾರಕಿಹೊಳಿ ಅವರನ್ನು ಮುಖಾಮುಖಿ ಮಾಡಿಸಿ, ಮತ್ತೊಂದು ಸುತ್ತಿನ ಸಂಧಾನ ಸಭೆ ನಡೆಸಲು ತೀರ್ಮಾನಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಪಟ್ಟು ಸಡಿಲಿಸದಿರಲು ನಾಯಕರ ತೀರ್ಮಾನ: ಕೆಪಿಸಿಸಿ ಅಧ್ಯಕ್ಷರನ್ನು ಬದಲಾಯಿಸಬೇಕೆಂಬ ಬೇಡಿಕೆಯನ್ನು ಈಗಾಗಲೇ ಸಿದ್ದರಾಮಯ್ಯ ಆಪ್ತ ಬಣ ಹಲವು ಸಮಯದಲ್ಲಿ ಪ್ರಸ್ತಾಪಿಸಿದೆ. ಆದರೆ ಪದೇಪದೆ ಈ ರೀತಿಯ ಹೇಳಿಕೆಯಿಂದ ಪಕ್ಷಕ್ಕಾಗುತ್ತಿರುವ ಡ್ಯಾಮೇಜ್ ಕಂಟ್ರೋಲ್ ಮಾಡಲು, ಹೈಕಮಾಂಡ್ ಸೂಚನೆ ನೀಡಿದ್ದರೂ 'ಮೌನ'ವಾಗದಿರಲು ತೀರ್ಮಾನಿಸಿದ್ದಾರೆ. ಲೋಕಸಭಾ ಚುನಾವಣೆಯ ಬಳಿಕ ಅಧ್ಯಕ್ಷ ಸ್ಥಾನ ಬದಲಾವಣೆಯ ಪ್ರಸ್ತಾಪವನ್ನು ಹೈಕಮಾಂಡ್ ಮಾಡಿರುವುದನ್ನೇ ಬ್ರಹ್ಮಾಸ್ತ್ರದ ರೀತಿಯಲ್ಲಿ ಬಳಸಿಕೊಳ್ಳಲು ಈ ಎಲ್ಲ ನಾಯಕರು ಸಜ್ಜಾಗಿದ್ದಾರೆ ಎನ್ನಲಾಗಿದೆ.

ಭಂಡಾರಿಗೆ ವರದಿ ಕೇಳಿದ ಎಐಸಿಸಿ

ಪಕ್ಷದ ಹೈಕಮಾಂಡ್ ಸೂಚನೆಯ ಬಳಿಕವೂ ಹೇಳಿಕೆ ನೀಡುತ್ತಿರುವ ಸಚಿವರ ಬಗ್ಗೆ ವರದಿ ನೀಡುವಂತೆ ಪಕ್ಷದ ಹೈಕಮಾಂಡ್ ಕೆಪಿಸಿಸಿ ಕಾರ್ಯಾಧ್ಯಕ್ಷ ಮಂಜುನಾಥ್ ಭಂಡಾರಿಗೆ ಸೂಚನೆ ನೀಡಿದೆ. ಈ ಬಗ್ಗೆ ದೆಹಲಿಯಲ್ಲಿ ಮಾತನಾಡಿದ ಭಂಡಾರಿ, ಈಗಾಗಲೇ ಎಐಸಿಸಿ ಕರ್ನಾಟಕ ಉಸ್ತುವಾರಿ ರಣದೀಪ್ ಸುರ್ಜೇವಾಲ ಅವರು, ಪಕ್ಷ ತಾಯಿ ಇದ್ದಂತೆ, ಸರಕಾರ ಮಗುವಿದ್ದಂತೆ. ಯಾರೂ ಸಹ ಪಕ್ಷದ ಘನತೆಗೆ ಚ್ಯುತಿ ತರಬಾರದು ಎಂಬ ಸಂದೇಶ ನೀಡಿದ್ದಾರೆ. ಇದರ ಮಧ್ಯೆಯೂ ಕೆಲವು ನಾಯಕರು ಹೇಳಿಕೆ ನೀಡುತ್ತಿರುವುದು ಸರಿಯಲ್ಲ. ಕೆಲವು ಸಚಿವರು ಪದೇ ಪದೆ ಮಾತನಾಡುತ್ತಿದ್ದಾರೆ. ಇದು ಸರಿಯಲ್ಲ. ಆದರೆ, ಸಚಿವ ಆರ್. ಬಿ. ತಿಮ್ಮಾಪುರ, ಸತೀಶ್ ಜಾರಕಿಹೊಳಿ ಹಾಗೂ ಎಚ್.ಸಿ. ಮಹದೇವಪ್ಪ ಅವರು ಪದೇ ಪದೆ ಮಾತನಾಡುತ್ತಿದ್ದು, ಹೈಕಮಾಂಡ್ ಗಂಭೀರವಾಗಿ ಎಲ್ಲವನ್ನೂ ಗಮನಿಸುತ್ತಿದೆ. ಎಲ್ಲ ಸಚಿವರ ರಿಪೋರ್ಟ್ ಕಾರ್ಡ್‌ಗಳನ್ನು ಹೈಕಮಾಂಡ್ ಸೂಕ್ಷ್ಮವಾಗಿ ಗಮನಿಸುತ್ತಿದೆ. ನಾಯಕತ್ವದ ಬಗ್ಗೆ ಮಾತನಾಡಬಾರದು ಎಂದು ಹೈಕಮಾಂಡ್ ಸೂಚನೆ ನೀಡಿದ ಮೇಲೆಯೂ ಪಕ್ಷದ ಆದೇಶವನ್ನು ಉಲ್ಲಂಘಿಸುವವರಿಗೆ ಮುಂದಿನ ದಿನಗಳಲ್ಲಿ ಪರಿಣಾಮ ಬೀರಲಿದೆ ಪಕ್ಷದ ವರಿಷ್ಠರು ಸೂಚಿಸಿದ್ದಾರೆ ಎಂದು ಎಚ್ಚರಿಸಿದ್ದಾರೆ. ಆದರೆ ಈ ಎಚ್ಚರಿಕೆಗೆ ಬಹುತೇಕ ಸಚಿವರು ಡೋಂಟ್‌ಕೇರ್ ಎಂದಿದ್ದಾರೆ.

ಅಧ್ಯಕ್ಷ ಸ್ಥಾನದೊಂದಿಗೆ ಎರಡು ಪ್ರಮುಖ ಖಾತೆಗಳಿರುವುದರಿಂದ ಬದಲಾಯಿಸಿ, ಬೇರೆಯವರನ್ನು ಮಾಡಬೇಕೆಂದು ಕೇಳುತ್ತಾರೆ. ಈ ಹಿಂದೆ ನಾನು ಕೆಪಿಸಿಸಿ ಅಧ್ಯಕ್ಷನಾಗಿದ್ದ ಸಮಯದಲ್ಲಿಯೂ, ಇದೇ ಪರಿಸ್ಥಿತಿ ಇತ್ತು. ನಾನು ಸಚಿವ ಸ್ಥಾನದ ಬದಲಿಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ಆಯ್ಕೆ ಮಾಡಿಕೊಂಡಿದ್ದೆ.
- ಡಾ.ಜಿ. ಪರಮೇಶ್ವರ, ಗೃಹ ಸಚಿವ

ಕೆಪಿಸಿಸಿ ಅಧ್ಯಕ್ಷ ಸ್ಥಾನವಾಗಲಿ, ಪಕ್ಷದ ಯಾವುದೇ ಹುದ್ದೆಯಾಗಲಿ ಯಾವುದೋ ಅಂಗಡಿ ಅಥವಾ ಮಾಧ್ಯಮಗಳ ಮುಂದೆ ಮಾತಾಡಿದರೆ ಸಿಗುವುದಿಲ್ಲ. ನಾವು ಮಾಡುವ ಕೆಲಸ, ಶ್ರಮವನ್ನು ಪಕ್ಷದ ನಾಯಕರು ಗುರುತಿಸಿ ಅದಕ್ಕೆ ಸೂಕ್ತವಾಗಿ ಹುದ್ದೆ ನೀಡುತ್ತಾರೆ. ಏನಾದರೂ ಸಮಸ್ಯೆಯಿದ್ದರೆ ಅದನ್ನು ಹೈಕಮಾಂಡ್ ಮುಂದೆ ಹೇಳಲಿ.
- ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ

ಲೋಕಸಭಾ ಚುನಾವಣೆ ಬಳಿಕ ಅಧ್ಯಕ್ಷರನ್ನು ಬದಲಾಯಿಸುವುದಾಗಿ ಹೈಕಮಾಂಡ್ ಹೇಳಿತ್ತು. ಆದ್ದರಿಂದ ಈ ಗೊಂದಲ ಸೃಷ್ಟಿಯಾಗಿದೆ. ಲೋಕಸಭಾ ಚುನಾವಣೆ ನಡೆದು 6 ತಿಂಗಳು ಕಳೆದಿದೆ. ವಿಧಾನಸಭಾ ಚುನಾವಣೆವರೆಗೂ ಡಿಕೆ ಶಿವಕುಮಾರ್ ಅವರೇ, ಪೂರ್ಣ ಪ್ರಮಾಣದ ಅಧ್ಯಕ್ಷರಾಗಿ ಮುಂದುವರಿಯಲಿ. ಆದರೆ, ಹೈಕಮಾಂಡ್ ಈ ಗೊಂದಲವನ್ನು ನಿವಾರಿಸಬೇಕು.
- ಕೆ.ಎನ್. ರಾಜಣ್ಣ, ಸಹಕಾರ ಸಚಿವ

ನನಗೆ ನೋಟಿಸ್ ಕೊಟ್ಟರೆ ಅದರಿಂದ ಅನಾಹುತವೇನೂ ಆಗುವುದಿಲ್ಲ, ನೋಟಿಸ್ ಕೊಡುವ ಅಧಿಕಾರ ಅವರಿಗಿದೆ, ನಾನು ಅದಕ್ಕೆ ತಕ್ಕ ಉತ್ತರ ನೀಡುತ್ತೇನೆ. ನಾನು ಅರ್ಧಗಂಟೆ ಮಾಧ್ಯಮದ ವರೊಂದಿಗೆ ಮಾತನಾಡಿದ ವಿಡಿಯೊ ಸಾಕ್ಷ್ಯ ಕೂಡ ನನ್ನ ಬಳಿ ಇದೆ. ಅದನ್ನೇ ಆಧಾರವಾಗಿಟ್ಟುಕೊಂಡು ಉತ್ತರ ನೀಡುವೆ.
- ಸತೀಶ್ ಜಾರಕಿಹೊಳಿ, ಲೋಕೋಪಯೋಗಿ ಸಚಿವ

ಮಧ್ಯರಾತ್ರಿ ಬಾಲಿವುಡ್ ನಟನ ಮನೆಗೆ ನುಗ್ಗಿದ ಆಗಂತುಕ, 6 ಬಾರಿ ಚಾಕು ಇರಿತ , ಶಸ್ತ್ರಚಿಕಿತ್ಸೆ ಯಶಸ್ವಿ, ಪ್ರಾಣಾಪಾಯದಿಂದ ಪಾರು

ಸೈಫ್ ಅಲಿ ಮೇಲೆ ದಾಳಿ, ತೀವ್ರ ಗಾಯ



ಮುಂಬೈ: ಮಧ್ಯ ರಾತ್ರಿ ತಮ್ಮ ಮನೆಗೆ ನುಗ್ಗಿದ ಆಗಂತುಕನೊಬ್ಬನ ಚಾಕು ದಾಳಿಗೆ ಗುರಿಯಾಗಿರುವ ಬಾಲಿವುಡ್ ನಟ ಸೈಫ್ ಅಲಿ ಖಾನ್ ತೀವ್ರ ಗಾಯಗೊಂಡು ಮುಂಬೈನ ಲೀಲಾವತಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಮಧ್ಯರಾತ್ರಿ 2.30 ರ ಸುಮಾರಿಗೆ ಸೈಫ್ ಅಲಿ ಖಾನ್ ಮನೆಗೆ ನುಗ್ಗಿದ ಆಗಂತುಕ ಸುಮಾರು ಆರು ಬಾರಿ ಸೈಫ್ ಅಲಿ ಖಾನ್ ಅವರಿಗೆ ಇರಿದಿದ್ದಾನೆ. ಕುತ್ತಿಗೆ, ಬೆನ್ನು, ಎಡಗೈ, ಬಲಗೈ ಸೇರಿದಂತೆ ದೇಹದ ಹಲವೆಡೆ ಗಂಭೀರ ಗಾಯಗೊಂಡಿರುವ ಸೈಫ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ. ಸೈಫ್ ಅವರ ಬೆನ್ನುಹುರಿಗೆ ಹೊಕ್ಕಿದ್ದ ನೀಡಲ್ ಅನ್ನು ಶಸ್ತ್ರಚಿಕಿತ್ಸೆ ಮಾಡಿ ಹೊರತೆಗೆಯಲಾಗಿದೆ. ಸ್ಪೈನ್ ಫ್ಲ್ಯೂಯಿಡ್ ಅನ್ನು ನಿಲ್ಲಿಸಲು ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಹಾಗೇ ಅವರ ಎಡಗೈ ಮತ್ತು ಬಲಭಾಗದ ಕುತ್ತಿಗೆಯಲ್ಲಿ ಆಳವಾದ ಗಾಯಗಳಾಗಿವೆ. ಪ್ಲಾಸ್ಟಿಕ್ ಸರ್ಜರಿ ತಜ್ಞರ ಸಹಕಾರದೊಂದಿಗೆ ಈ ಭಾಗಗಳಿಗೂ ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಈಗ ಅವರ ಆರೋಗ್ಯವು ಸುಸ್ಥಿತಿಯಲ್ಲಿದ್ದು, ಅಪಾಯದಿಂದ ಪಾರಾಗಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

→ 4

ಆಗಿದ್ದೇನು ?

ಕರೀನಾ ಕಪೂರ್ ಅವರ ತಂಡದ ಸದಸ್ಯರು ಹೇಳಿರುವ ಪ್ರಕಾರ ಕಳೆದ ರಾತ್ರಿ ಸೈಫ್ ಅಲಿ ಖಾನ್ ಮತ್ತು ಕರೀನಾ ನಿವಾಸದಲ್ಲಿ ಕಳ್ಳತನ ಯತ್ನ ನಡೆದಿತ್ತು. ಈ ಸಂದರ್ಭದಲ್ಲಿ ಪ್ರತಿರೋಧ ಒಡ್ಡಿದ ಸೈಫ್ ಅವರ ಮೇಲೆ ಕಳ್ಳ ದಾಳಿ ನಡೆಸಿದ್ದಾನೆ. ಬುಧವಾರ ಕರೀನಾ ಸಹೋದರಿ ಕರಿಷ್ಮಾ ಕಪೂರ್ ಮತ್ತು ಆಪ್ತರಾದ ಸೋನಮ್ ಕಪೂರ್ ಮತ್ತು ರಿಯಾ ಕಪೂರ್ ಜತೆ ಡಿನ್ನರ್ ಡೇಟ್ ಮಾಡಿದ್ದರು. ಈ ಬಗ್ಗೆ ನಟಿ ಗರ್ಲ್ಸ್ ನೈಟ್ ಇನ್ ಎಂಬ ಶೀರ್ಷಿಕೆಯಡಿ ಇನ್ಸ್ಟಾಗ್ರಾಂನಲ್ಲಿ ಮಾಹಿತಿ ಹಂಚಿಕೊಂಡಿದ್ದರು. ಪಾರ್ಟಿಯಿಂದ ಹಿಂತಿರುಗಿದ ಕರೀನಾ ಕಳ್ಳನನ್ನು ನೋಡಿ ಕಿರುಚಿದ್ದಾರೆ. ಈ ವೇಳೆ ಓಡಿ ಬಂದ ಕೆಲಸದಾಕೆಯ ಮೇಲೆ ದಾಳಿ ಮಾಡಲು ಮುಂದಾಗುತ್ತಿದ್ದಂತೆ ಕರೀನಾ ಮಗ ತೈಮೂರ್‌ನನ್ನು ಕರೆದುಕೊಂಡು ರೂಮ್‌ಗೆ ಓಡಿದ್ದರು. ಕಿರುಚಾಟ ಕೇಳಿ ಕೆಲಸದಾಕೆ ರಕ್ಷಣೆಗೆ ಮುಂದಾದ ಸೈಫ್ ಮೇಲೆ ಆತ ಚಾಕುವಿನಿಂದ ಹಲ್ಲೆ ನಡೆಸಿದ್ದಾನೆ.

8ನೇ ವೇತನ ಆಯೋಗ ರಚನೆಗೆ ಕೇಂದ್ರ ಸಂಪುಟ ನಿರ್ಧಾರ

ಕೇಂದ್ರ ನೌಕರರಿಗೆ ಸಂಕ್ರಾಂತಿ ಗಿಫ್ಟ್

ದೆಹಲಿ: ಸಂಕ್ರಾಂತಿ ಹಬ್ಬದ ಬೆನ್ನಿಗೇ ಕೇಂದ್ರ ಸರಕಾರಿ ನೌಕರರಿಗೆ ಸಿಹಿ ಸುದ್ದಿ ದೊರಕಿದ್ದು, ನೌಕರರ ವೇತನ ಮತ್ತು ಪಿಂಚಣಿದಾರರ ಭತ್ಯೆಗಳನ್ನು ಪರಿಷ್ಕರಿಸಲು 8ನೇ ವೇತನ ಆಯೋಗ ರಚಿಸಲು ಕೇಂದ್ರ ಸಚಿವ ಸಂಪುಟ ಗುರುವಾರ ಅನುಮೋದನೆ ನೀಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯಲ್ಲಿ 8ನೇ ವೇತನ ಆಯೋಗವನ್ನು ಸ್ಥಾಪಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಗುರುವಾರ ತಿಳಿಸಿದ್ದಾರೆ.

ಆಯೋಗದ ಅಧ್ಯಕ್ಷರು ಮತ್ತು ಇಬ್ಬರು ಸದಸ್ಯರನ್ನು ಶೀಘ್ರದಲ್ಲೇ ನೇಮಕ ಮಾಡಲಾಗುವುದು ಎಂದು ಸಚಿವರು ತಿಳಿಸಿದರು. 2025ರ ಬಜೆಟ್ ಘೋಷಣೆಗಳಿಗೆ ಮುನ್ನವೇ ಕೇಂದ್ರ ಸರಕಾರ ಈ ನಿರ್ಧಾರ ಪ್ರಕಟಿಸಿದೆ. 7 ನೇ ವೇತನ ಆಯೋಗವನ್ನು 2016 ರಲ್ಲಿ ಸ್ಥಾಪಿಸಲಾಗಿತ್ತು. ಇದರ ಅವಧಿ 2026 ರಲ್ಲಿ ಕೊನೆಗೊಳ್ಳಲಿದೆ. 7 ನೇ ವೇತನ ಆಯೋಗದ ಅವಧಿ ಮುಗಿಯುವ ಮುನ್ನ, ಕೇಂದ್ರ ಸರ್ಕಾರಿ ನೌಕರರ ವೇತನವನ್ನು ಪರಿಷ್ಕರಿಸಲು 8 ನೇ ವೇತನ ಆಯೋಗವನ್ನು ಸ್ಥಾಪಿಸುವ ನಿರ್ಧಾರವನ್ನು ತೆಗೆದುಕೊಂಡಿದೆ. ಸಂಪ್ರದಾಯದಂತೆ 10 ವರ್ಷಗಳಿಗೊಮ್ಮೆ ಅಂದರೆ 2026ರ ಜನವರಿ 1 ರಿಂದ 8ನೇ ವೇತನ ಆಯೋಗದ ವರದಿ ಜಾರಿಗೆ ಬರಬೇಕು.

ಇಬ್ಬರ ಗುಂಡಿಕ್ಕಿ ಕೊಂದು ದರೋಡೆ

ಬೀದರ್ ಡಿಸಿ ಕಚೇರಿ ಎದುರು ಹಾಡಹಗಲೇ ಎಟಿಎಂ ಸಿಬ್ಬಂದಿಗೆ ಗುಂಡು, 93 ಲಕ್ಷ ದರೋಡೆ
ಬೈಕಿನಲ್ಲಿ ಹಣದ ಬಾಕ್ಸ್ ಒಯ್ದ ಹಂತಕರು | ಹೈದರಾಬಾದ್‌ನಲ್ಲಿ ಒಬ್ಬ ಸೆರೆ, ಮತ್ತೊಬ್ಬ ಪರಾರಿ

ಬೀದರ್: ನಗರದ ಜಿಲ್ಲಾ ನ್ಯಾಯಾಲಯ ಹಾಗೂ ಜಿಲ್ಲಾಧಿಕಾರಿ ಕಚೇರಿಗೆ ಹೊಂದಿಕೊಂಡಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ (ಎಸ್.ಬಿ.ಐ) ಸೆಕ್ಯೂರಿಟಿ ಏಜೆನ್ಸಿ ಸಿಬ್ಬಂದಿ ಮೇಲೆ ಗುರುವಾರ ಹಾಡಹಗಲೇ ಸಿನಿಮೀಯ ಶೈಲಿಯಲ್ಲಿ ದಾಳಿ ನಡೆಸಿ ಇಬ್ಬರನ್ನು ಹತ್ಯೆಗೈದು 93 ಲಕ್ಷ ರು.ಗಳ ನಗದು ಇದ್ದ ಬಾಕ್ಸ್ ಅಪಹರಿಸಿ ಪರಾರಿಯಾಗಿದ್ದ ಇಬ್ಬರು ದರೋಡೆಕೋರರ ಪೈಕಿ ಒಬ್ಬನನ್ನು ಪೊಲೀಸರು ಹೈದರಾಬಾದ್ ನಲ್ಲಿ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ದುಷ್ಕರ್ಮಿಗಳ ಗುಂಡೇಟಿಗೆ ಬಲಿಯಾದ ಸಿಬ್ಬಂದಿಯನ್ನು ಗಿರೀಶ ವೆಂಕಟೇಶ್ (49) ಮತ್ತು ಶಿವಕುಮಾರ್(26) ಎಂದು ಗುರುತಿಸಲಾಗಿದೆ.

ಹೇಗೆ ನಡೆಯಿತು ದಾಳಿ.?

ಎಸ್‌ಬಿಐ ಏಜೆನ್ಸಿ ಸಿಬ್ಬಂದಿ ಬೆಳಗ್ಗೆ 10.55ರಿಂದ 11 ಗಂಟೆ ಸುಮಾರಿಗೆ ತಮ್ಮ ವಾಹನದಲ್ಲಿ ಹಣದ ಸಮೇತ ಬ್ಯಾಂಕಿಗೆ ಬಂದಿದ್ದರು. ಈ ವೇಳೆ ಬೈಕಿನಲ್ಲಿ ಬಂದ ಅಪರಿಚಿತರು ಹಣ ಕಸಿದುಕೊಳ್ಳಲು ಯತ್ನಿಸಿದ್ದಾರೆ. ಸಿಬ್ಬಂದಿ ಹಣ ಕೊಡದಿದ್ದಾಗ ಕಾರದ ಪುಡಿ ಎರಚಿ, ಬಳಿಕ ಗುಂಡಿನ ದಾಳಿ ನಡೆಸಿ, 93 ಲಕ್ಷ ರು.ಗಳೊಂದಿಗೆ ಸ್ಥಳದಿಂದ ಪರಾರಿಯಾದರು. ಈ ದಾಳಿಯಲ್ಲಿ ಗಿರೀಶ್ ವೆಂಕಟೇಶ್ ಸ್ಥಳದಲ್ಲೇ ಮೃತಪಟ್ಟರೆ, ಗಂಭೀರವಾಗಿ ಗಾಯಗೊಂಡ ಶಿವಕುಮಾರ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಬ್ಯಾಂಕಿನ ಕಚೇರಿ ಎದುರು ಗಿರೀಶ್ ದೇಹ ರಕ್ತದ ಮಡುವಿನಲ್ಲಿ ಬಿದ್ದಿತ್ತು. ನ್ಯಾಯಾಲಯ ಹಾಗೂ ಜಿಲ್ಲಾಧಿಕಾರಿ ಕಚೇರಿ ಎದುರು ಸೇರಿದ್ದ ನೂರಾರು ಜನ ಜಮಾಯಿಸಿದರು. ಸ್ಥಳಕ್ಕೆ ಧಾವಿಸಿದ ಕುಟುಂಬಸ್ಥರ ರೋದನ ಮುಗಿಲು ಮುಟ್ಟಿತ್ತು. ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಸೇರಿದಂತೆ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದರು.

ಪರಾರಿ ವಿಡಿಯೋ ವೈರಲ್

ದುಷ್ಕರ್ಮಿಗಳು ಎಟಿಎಂ ಸಿಬ್ಬಂದಿ ಮೇಲೆ ಗುಂಡು ಹಾರಿಸಿ ಹಣದ ಪೆಟ್ಟಿಗೆಯನ್ನು ರಾಜಾರೋಷವಾಗಿ ಬೈಕ್ ಮೇಲೆ ಇಟ್ಟುಕೊಂಡು ಪರಾರಿಯಾದ ವಿಡಿಯೋ ವೈರಲ್ ಆಗಿದೆ. ಕಪ್ಪು ಬಣ್ಣದ ಜಾಕೆಟ್ ಹಾಗೂ ಹೆಲ್ಮೆಟ್ ಧರಿಸಿದ ಕಳ್ಳರು ಬೈಕ್ ಮೇಲೆ ತೆರಳಿದ ದೃಶ್ಯ ವೈರಲ್ ಆಗಿದೆ.

ಮಿಂಚಿನ ಕಾರ್ಯಾಚರಣೆ

ಈ ಕೃತ್ಯದ ಬೆನ್ನಲ್ಲೇ ಬೀದರ್ ಪೊಲೀಸರ 9 ತಂಡಗಳು ಹೈದರಾಬಾದ್ ಹಾಗೂ ಇತರ ಸ್ಥಳಗಳಿಗೆ ಧಾವಿಸಿ ದರೋಡೆಕೋರರಿಗಾಗಿ ಶೋಧನೆ ನಡೆಸಿತು. ಹೈದರಾಬಾದ್‌ನ ಖಾಸಗಿ ಟ್ರಾವೆಲ್ಸ್ ಮೂಲಕ ಛತ್ತೀಸ್ ಗಢ ರಾಜಧಾನಿ ರಾಯಪುರಕ್ಕೆ ಟಿಕೆಟ್ ಬುಕ್ ಮಾಡಿದ್ದ ದುಷ್ಕರ್ಮಿಗಳ ಬಳಿಯಿದ್ದ ಚೀಲದ ಬಗ್ಗೆ ಮ್ಯಾನೇಜರ್ ಸಂಶಯ ವ್ಯಕ್ತಪಡಿಸಿದ್ದರು. ಇದೇ ವೇಳೆಗೆ ಪೊಲೀಸರ ತಂಡ ಅಲ್ಲಿಗೆ ತಲುಪಿದಾಗ ಗುಂಡಿನ ಚಕಮಕಿ ನಡೆಯಿತು. ಒಬ್ಬ ಸೆರೆಸಿಕ್ಕಿದರೆ ಮತ್ತೊಬ್ಬ ಪರಾರಿಯಾಗಿದ್ದಾನೆ.

ಇಸ್ರೋ ಮತ್ತೊಂದು ಐತಿಹಾಸಿಕ ಸಾಧನೆ, ಡಾಕಿಂಗ್ ಸಕ್ಸಸ್

ಇಸ್ರೋ ಸ್ಪಾಡೆಕ್ಸ್ ಯೋಜನೆ ಯಶಸ್ವಿ

ಬೆಂಗಳೂರು: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ತನ್ನ ಸ್ಪಾಡೆಕ್ಸ್ ಮಿಷನ್ ಅಡಿಯಲ್ಲಿ ದೇಶದ ಮೊದಲ ಉಪಗ್ರಹ ಡಾಕಿಂಗ್ ಪ್ರಯೋಗವನ್ನು ಗುರುವಾರ ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಇದರೊಂದಿಗೆ ಬಾಹ್ಯಾಕಾಶ ನಿಲ್ದಾಣ ನಿರ್ಮಿಸುವತ್ತ ದೇಶ ದಿಟ್ಟ ಹೆಜ್ಜೆ ಇಟ್ಟಿದೆ.

ಇದರೊಂದಿಗೆ ಅಮೆರಿಕ, ರಷ್ಯಾ ಮತ್ತು ಚೀನಾ ನಂತರ ಈ ಸಾಧನೆ ಮಾಡಿದ ನಾಲ್ಕನೇ ರಾಷ್ಟ್ರ ಎಂಬ ಹೆಗ್ಗಳಿಕೆಗೆ ಭಾರತ ಪಾತ್ರವಾಗಿದೆ. ಇದು ನಿಜಕ್ಕೂ ಭಾರತಕ್ಕೆ ಹೆಮ್ಮೆಯ ಕ್ಷಣ. ಈ ಐತಿಹಾಸಿಕ ಸಾಧನೆಗಾಗಿ ಇಸ್ರೋವನ್ನು ಪ್ರಧಾನಿ ಮೋದಿ ಅಭಿನಂದಿಸಿದ್ದಾರೆ. ಕಳೆದ ವರ್ಷಾಂತ್ಯ ಡಿಸೆಂಬರ್ 30ರಂದು ಪಿಎಸ್‌ಎಲ್‌ ವಿ-ಸಿ 60 ರಾಕೆಟ್‌ನಲ್ಲಿ ಉಡಾವಣೆಯಾದ ಎರಡು ಉಪಗ್ರಹಗಳಾದ ಎಸ್‌ಡಿಎಕ್ಸ್ 01 ಮತ್ತು ಎಸ್‌ಡಿಎಕ್ಸ್ 02 ಡಾಕಿಂಗ್‌ನಲ್ಲಿ ಒಳಗೊಂಡಿತ್ತು. ಸತತ ಪ್ರಯತ್ನಗಳ ನಂತರ ಉಪಗ್ರಹಗಳನ್ನು ಯಶಸ್ವಿಯಾಗಿ ಡಾಕಿಂಗ್ ಮಾಡಲಾಯಿತು. ಬಾಹ್ಯಾಕಾಶ ನೌಕೆ ಡಾಕಿಂಗ್ ಯಶಸ್ವಿಯಾಗಿ ಪೂರ್ಣ ಗೊಂಡಿದೆ. ಇದು ಒಂದು ಐತಿಹಾಸಿಕ ಕ್ಷಣ ಎಂದು ಇಸ್ರೊ ಪ್ರಕಟಿಸಿದೆ.

ವಿವರಪುಟ → 12

ಚಾಮುಂಡಿ ದರ್ಶನ ಪಡೆದ ದರ್ಶನ್

ಮೈಸೂರು: ನಟ ದರ್ಶನ್ ಗುರುವಾರ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ತಾಯಿ ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿದರು.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಸಿಲುಕಿ ಜೈಲುಸೇರಿದ ಬಳಿಕ ಮೈಸೂರಿನತ್ತ ಸುಳಿದಿರಲಿಲ್ಲ. ಇತ್ತೀಚೆಗಷ್ಟೇ ಜಾಮೀನು ದೊರೆತ ಹಿನ್ನೆಲೆಯಲ್ಲಿ ಬೆಟ್ಟಕ್ಕೆ ಪತ್ನಿ ವಿಜಯ ಲಕ್ಷ್ಮಿ ಹಾಗೂ ಸ್ನೇಹಿತರ ಸಮೇತ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಕಳೆದ ಕೆಲ ದಿನಗಳಿಂದ ಟೆಂಪಲ್ ರನ್ ಮಾಡುತ್ತಿರುವ ನಟ ದರ್ಶನ್ ಆಗಮನದ ಮಾಹಿತಿ ಸಿಗುತ್ತಿದ್ದಂತೆ ನಿತ್ಯ ಭಕ್ತರ ಹೊರತಾಗಿ ಅಭಿಮಾನಿ ಬಳಗ ಕೂಡ ದೇವಸ್ಥಾನದ ಆವರಣದಲ್ಲಿ ಜಮಾಯಿಸಿತ್ತು.

ಫನ್‌ತರಂಗ
- ರಘುಪತಿ ಶೃಂಗೇರಿ -

ಎರಡಕ್ಕಿಂತ ಹೆಚ್ಚು ಮಕ್ಕಳಿದ್ದರೆ ಮಾತ್ರಾ ಸ್ಥಳೀಯ ಚುನಾವಣೆಗೆ ಸ್ಪರ್ಧೆ ಮಾಡಲು ಅವಕಾಶ ನೀಡಲಾಗುವುದು - ಆಂಧ್ರ ಸಿಎಂ
ಸುದ್ದಿ



ಮುಂದಿನ ಸಂಪುಟದಲ್ಲಿ ಜಾತಿಗಣತಿ ವರದಿ ಮಂಡನೆ: ಪಾಟೀಲ್

ಬೆಂಗಳೂರು: ಬಹುನಿರೀಕ್ಷಿತ ಜಾತಿಗಣತಿಯನ್ನು ಮುಂದಿನ ಸಚಿವ ಸಂಪುಟ ಸಭೆ ಯಲ್ಲಿ, ಸಂಪುಟದ ಮುಂದಿಡಲು ತೀರ್ಮಾನಿ ಸಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಸ್ಪಷ್ಟಪಡಿಸಿದರು.

ಕಾಂತರಾಜು ಸಮಿತಿ 2015ರಲ್ಲಿ ಮಂಡಿಸಿರುವ ಸಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಬಹಿರಂಗಪಡಿಸಬೇಕು ಎನ್ನುವ ಆಗ್ರಹ ಹಲವು ದಿನಗಳಿಂದ ಇದೆ. ಆದರೆ ಜಾತಿ ಗಣತಿ ಬಹಿರಂಗಕ್ಕೆ ಪರ-ವಿರೋಧ ಮಾತಿರುವುದರಿಂದ ಈ ಹಿಂದಿನ ಸರಕಾರಗಳು ಸಾಹಸಕ್ಕೆ ಕೈಹಾಕಿಲ್ಲ. ಆದರೀಗ ಸಿದ್ದರಾಮಯ್ಯ ಅವರು ಮುಂದಿನ ಸಂಪುಟದಲ್ಲಿ ಮಂಡಿಸಲು ತೀರ್ಮಾನಿಸಿದ್ದಾರೆ. ಗುರುವಾರ ವಿಧಾನಸೌಧದಲ್ಲಿ ನಡೆದ ಸಚಿವ ಸಂಪುಟದ ಅಜೆಂಡಾ ಕಾಪಿಯಲ್ಲಿ ಜಾತಿಗಣತಿಯನ್ನು ಮುಚ್ಚಿದ ಲಕೋಟೆಯಲ್ಲಿ ಬಹಿರಂಗಪಡಿಸಬೇಕು ಎನ್ನುವ ವಿಷಯವಿತ್ತು. ಮುಂದಿನ ವಾರ ಬೆಳಗಾವಿಯಲ್ಲಿ ಗಾಂಧಿ ಭಾರತ ಕಾರ್ಯಕ್ರಮವಿರುವ ಸಮಯದಲ್ಲಿ ಗೊಂದಲ ಬೇಡವೆಂದು ಅಜೆಂಡಾವನ್ನು ಮುಂದಿನ ಸಚಿವ ಸಂಪುಟ ಸಭೆಗೆ ಮುಂದೂಡಲು ತೀರ್ಮಾನಿಸಲಾಗಿದೆ ಎಂದು ತಿಳಿದುಬಂದಿದೆ.

ಪ್ರಾದೇಶಿಕ ಪಕ್ಷಕ್ಕೂ ಬೇಕಿದೆ ಜಾರಕಿಹೊಳಿ ಸಹೋದರರು

ರಾಜ್ಯ ರಾಜಕಾರಣ: ಮತ್ತೆ ಸಾಹುಕಾರ್ ದರ್ಬಾರ್

ಬೆಂಗಳೂರು: ಎರಡು ರಾಷ್ಟ್ರೀಯ ಪಕ್ಷಗಳು ಸೇರಿದಂತೆ ಪ್ರಾದೇಶಿಕ ಪಕ್ಷಕ್ಕೆ ಬೆಳಗಾವಿಯೇ ಚಟುವಟಿಕೆಯ ಕೇಂದ್ರ ಸ್ಥಾನವಾಗಿದೆ. ಪ್ರತಿಪಕ್ಷಗಳಲ್ಲಿದ್ದರೂ ಜಾರಕಿಹೊಳಿ ಸಹೋದರರೇ ಈ ಮೂರು ಪಕ್ಷಗಳಿಗೂ ಹೈಕಮಾಂಡ್ ಎನ್ನುವಂತಾಗಿದ್ದು, ಅವರ ಸುತ್ತಲೇ ರಾಜ್ಯ ರಾಜಕಾರಣ ಗಿರಕಿ ಹೊಡೆಯುವಂತಾಗಿದೆ.

ವಿಶ್ವವಾಣಿ ವಿಶೇಷ

ಬಿಜೆಪಿಯಲ್ಲಿದ್ದ ಬಣ ಬಡಿದಾಟ ಈಗ ಕಾಂಗ್ರೆಸಿಗೂ ವಕ್ಕರಿಸಿಕೊಂಡಿದ್ದು ಗದ್ದುಗೆ ಗುದ್ದಾಟ ಕಳೆದ ವಾರದಿಂದ ತಾರಕಕ್ಕೇರಿದೆ. ಇತ್ತ ಪ್ರಾದೇಶಿಕ ಪಕ್ಷ ಜೆಡಿಎಸ್ ತನ್ನ ಅಸ್ತಿತ್ವ ಉಳಿಸಿಕೊಳ್ಳಲು ಮತ್ತದೇ ಜಾರಕಿಹೊಳಿ ಕುಟುಂಬವನ್ನು ಆಶ್ರಯಿಸಿದಂತಾಗಿದೆ. ರಾಷ್ಟ್ರೀಯ ಪಕ್ಷಗಳಾದ ಬಿಜೆಪಿ ಹಾಗೂ ಕಾಂಗ್ರೆಸ್ ಪಕ್ಷದ ರಾಜ್ಯ ಅಧ್ಯಕ್ಷರ ಸ್ಥಾನದ ಮೇಲೆ ಜಾರಕಿಹೊಳಿ ಬ್ರದರ್ಸ್ ಕಣ್ಣಿಟ್ಟಿದ್ದಾರೆ. ಕೆಪಿಸಿಸಿ ಅಧ್ಯಕ್ಷರು ನಾನಾಗಲಿ ಎಂದು ಕೆಲವರ ಆಶಯವಾಗಿದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದರೆ, ಇತ್ತ ಬಿಜೆಪಿಯಲ್ಲಿ ರಾಜ್ಯಾಧ್ಯಕ್ಷರನ್ನೇ ಬದಲಾಯಿಸಿ , ಹೊಸ ಅಧ್ಯಕ್ಷರ ನೇಮಿಸಿ ಎಂಬ ಹೋರಾಟದಲ್ಲಿ ರಮೇಶ್ ಜಾರಕಿಹೊಳಿ ತಂತ್ರ ಹೂಡಿದ್ದಾರೆ.

ಕೆಪಿಸಿಸಿ ಅಧ್ಯಕ್ಷತೆ ಮೇಲೆ ಜಾರಕಿಹೊಳಿ ಕಣ್ಣು..? ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ಸಿಎಂ ಬದಲಾವಣೆ / ಇಲ್ಲವೇ ಒಪ್ಪಂದವಾಗಿದೆ ಎನ್ನಲಾದ ವಿಚಾರ ಸಂಬಂಧ ಕಳೆದ

15 ದಿನಗಳಿಂದ ನಡೆದಿರುವ ಚರ್ಚೆ ತಾರಕ್ಕೇರಿದೆ. ಇದೇ ವೇಳೆ ಡಿಸಿಎಂ ಹುದ್ದೆ ಹಾಗೂ ಕೆಪಿಸಿಸಿ ಅಧ್ಯಕ್ಷರ ಪಟ್ಟ ಹಾಗೂ ಸಚಿವ ಸ್ಥಾನವೂ ಈಗ ಚರ್ಚಿತ ವಿಚಾರವಾಗಿದೆ. ಹೈಕಮಾಂಡ್ ಮುಂದೆ ನಡೆದ ಒಪ್ಪಂದದಂತೆ ಸಿಎಂ ಬದಲಾವಣೆಯ ವಿಚಾರ ಬಂದಾಗ , ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಈಗ ಹೊಂದಿರುವ ಹುದ್ದೆಗಳ ಮೇಲೂ ಚರ್ಚೆಯಾಗುತ್ತಿದೆ. ಕಾಂಗ್ರೆಸ್‌ನಲ್ಲಿ ಒಬ್ಬರಿಗೆ ಒಂದು ಹುದ್ದೆ ಎಂಬ ವಿಚಾರ ಮುನ್ನಲೆಗೆ ಬಂದಿದ್ದು ಕೆಪಿಸಿಸಿ ಅಧ್ಯಕ್ಷ ಪಟ್ಟದ ಮೇಲೆ ಈಗ ಸಚಿವ ಸತೀಶ್ ಜಾರಕಿಹೊಳಿ ಕಣ್ಣಿಟ್ಟಿದ್ದಾರೆ.

ಈ ಸಮಯದಲ್ಲೇ ಹುದ್ದೆ ಹಾಗೂ ಪಕ್ಷದ ವಿಚಾರವಾಗಿ ಬಹಿರಂಗ ಹೇಳಿಕೆ ನೀಡುವಂತಿಲ್ಲ ಹಾಗೂ ಡಿನ್ನರ್ ಪಾಲಿಟಿಕ್ಸ್ ಮಾಡುವಂತಿಲ್ಲ ಎಂದು ಹೈಕಮಾಂಡ್ ಸೂಚಿಸಿದ್ದರೂ, ಕೆಪಿಸಿಸಿಗೆ ಪೂರ್ಣಾವಧಿ ಅಧ್ಯಕ್ಷರ ನೇಮಕ ಆಗಲಿ ಎಂದು ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

→ 4

ಬಣ ಬಡಿದಾಟ ನಿರಂತರ

ಬಿಜೆಪಿಯಲ್ಲಿ ಬಣ ಬಡಿದಾಟ ಆರಂಭವಾಗಿ ಆರು ತಿಂಗಳಾಗಿದೆ. ಮೊದಲಿಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ರಾಜ್ಯಾಧ್ಯಕ್ಷರ ಬದಲಾವಣೆಗೆ ಕೂಗು ಹಾಕಿದ್ದರು. ನಂತರ ಈ ವಿಚಾರ ಕೇಂದ್ರದ ಶಿಸ್ತು ಸಮಿತಿಯ ಮುಂದೆ ಹೋಗಿತ್ತಾದರೂ, ವಕ್ಫ್ ಹೋರಾಟವೇ ಪ್ರಮುಖವಾಗಿತ್ತು. ಇನ್ನು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಬದಲಾವಣೆ ಆಗಲೇಬೇಕು ಎಂದು ಯತ್ನಾಳ್ ಹೇಳಿದ್ದಲ್ಲದೆ ಪ್ರತ್ಯೇಕವಾಗಿ ಬಣ ಮಾಡಿಕೊಂಡು ವಕ್ಫ್ ಹೋರಾಟ ಮಾಡಿದ್ದರು. ಇದಾದ ನಂತರ ರಾಜ್ಯಾಧ್ಯಕ್ಷರ ಬಣ ಬಿಜೆಪಿ ಕಚೇರಿ ಸೇರಿದಂತೆ ಹಲವೆಡೆ ಸರಣಿ ಸಭೆಗಳನ್ನು ಮಾಡಿ ತಮಗಿರುವ ಬಲ ಪ್ರದರ್ಶಿಸಿಕೊಂಡಿತ್ತು. ಅಲ್ಲದೆ ಕೇಂದ್ರದ ನಾಯಕರು ಮಧ್ಯ ಪ್ರವೇಶಿಸಿ ರಾಜ್ಯ ಘಟಕದಲ್ಲಾಗಿರುವ ಸಮಸ್ಯೆ ಬಗೆಹರಿಸಬೇಕೆಂದು ಮನವಿ ಮಾಡಿದ್ದರು. ಇದೇ ವೇಳೆ ಮಾಜಿ ಸಿಎಂ ಯಡಿಯೂರಪ್ಪ ಅಖಾಡಕ್ಕಿಳಿದಾಗ ಹೊಸ ಬಿಜೆಪಿ ರಾಜ್ಯಾಧ್ಯಕ್ಷರ ನೇಮಕಕ್ಕೆ ಬಿಎಸ್‌ವೈ ಸಹಕರಿಸಲಿ ಎಂದು ರಮೇಶ್ ಆಗ್ರಹಿಸಿದ್ದರು. ಇದಕ್ಕೆ ಪ್ರತಿಕ್ರಯಿಸಿದ್ದ ವಿಜಯೇಂದ್ರ, ಬಿಎಸ್‌ವೈ ಬಗ್ಗೆ ಮಾತನಾಡುವ ಹಕ್ಕು ರಮೇಶ್‌ಗಿಲ್ಲ ಎಂದು ಎಚ್ಚರಿಕೆ ಕೊಟ್ಟಿದ್ದರು. ಬಿಜೆಪಿಯ ಕೇಂದ್ರ ನಾಯಕರನ್ನು ವಿಜಯೇಂದ್ರ ಹಾಗೂ ಭಿನ್ನ ಬಣದ ನಾಯಕರು ಭೇಟಿಯಾಗಿದ್ದರೂ ಕೂಡ ರಾಜ್ಯದಲ್ಲಿ ಬಣ ಬಡಿದಾಟ ನಿಂತಿಲ್ಲ. ಬಿಜೆಪಿಯಲ್ಲಿ ಪ್ರಮುಖ ನಾಯಕರಿದ್ದರೂ ಕೂಡ ಇಲ್ಲೂ ರಮೇಶ್ ಜಾರಕಿಹೊಳಿ ಅವರ ಅಬ್ಬರ ಮುಂದುವರೆದಿದೆ.

ಏ.16, 17ಕ್ಕೆ ಸಿಇಟಿ ಪರೀಕ್ಷೆ

ಬೆಂಗಳೂರು: ಕರ್ನಾಟಕ ಪರೀಕ್ಷಾ ಪ್ರಾಧಿಕಾರ 2025ರ ಸಿಇಟಿ ಪರೀಕ್ಷೆ ದಿನಾಂಕವನ್ನು ಪ್ರಕಟಿಸಿದ್ದು, ಏಪ್ರಿಲ್ 16 ಹಾಗೂ 17 ರಂದು ಸಿಇಟಿ ಪರೀಕ್ಷೆ ನಡೆಯಲಿದೆ ಎಂದು ಮಾಹಿತಿ ನೀಡಿದೆ. ಜನವರಿ 23ರಿಂದ ಅರ್ಜಿ ಸಲ್ಲಿಕೆ ಆರಂಭವಾಗಲಿದ್ದು, ಈ ವರ್ಷದಿಂದ ಆಯಾ ಕಾಲೇಜುಗಳಲ್ಲಿ ದಾಖಲೆ ಪರಿಶೀಲನೆ ನಡೆಯಲಿದೆ ಎಂದು ಪ್ರಾಧಿಕಾರದ ಪ್ರಕಟಣೆ ತಿಳಿಸಿದೆ.

ಏಪ್ರಿಲ್ 16ರಂದು ಬೆಳಿಗ್ಗೆ 10.30ರಿಂದ ಭೌತವಿಜ್ಞಾನ, ಮಧ್ಯಾಹ್ನ 2.30ರಿಂದ ರಸಾಯನ ವಿಜ್ಞಾನ ಪರೀಕ್ಷೆ ನಡೆಯಲಿದೆ. ಏಪ್ರಿಲ್ 17ರಂದು ಬೆಳಿಗ್ಗೆ ಗಣಿತ ಮತ್ತು ಮಧ್ಯಾಹ್ನ ಜೀವವಿಜ್ಞಾನ ವಿಷಯಗಳ ಪರೀಕ್ಷೆಗಳು ನಡೆಯಲಿವೆ. ಏ.18ರಂದು ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ ನಡೆಯಲಿದೆ ಎಂದು ಕೆಇಎ ಮಾಹಿತಿ ನೀಡಿದೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಉನ್ನತ ಶಿಕ್ಷಣ ಸಚಿವ ಎಂಸಿ ಸುಧಾಕರ್, ''ಇದೇ ಮೊದಲ ಭಾರಿಗೆ ವರ್ಷದಲ್ಲಿ ನಡೆಯುವ ಎಲ್ಲಾ ವೃತ್ತಿಪರ ಕೋರ್ಸ್‌ಗಳ ಪ್ರವೇಶ ಪರೀಕ್ಷೆಗಳ ಬಗ್ಗೆ ಒಮ್ಮೆಲೇ ಮಾಹಿತಿ ನೀಡಲಾಗಿದೆ'' ಎಂದು ತಿಳಿಸಿದ್ದಾರೆ.

ಸಮಾಚಾರ ಸಣ್ಣದಲ್ಲ

ಗಜಪಡೆಯ ದಾಳಿಗೆ ತೆಂಗಿನ ಮರಗಳು ನಾಶ

ಬೇಲೂರು: ಕಾಡಾನೆಗಳ ಹಿಂಡಿನ ಮನಸೋ ಇಚ್ಛೆ ದಾಳಿಗೆ ನೂರಕ್ಕೂ ಹೆಚ್ಚು ತೆಂಗಿನಮರಗಳು ನಾಶವಾಗಿರುವ ಘಟನೆ ತಾಲೂಕಿನ ಮಾಳೇಗೆರೆ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಗಿರೀಶ್ ಎಂಬುವವರು ತಮ್ಮ ಜಮೀನಿನಲ್ಲಿ ಕಷ್ಟಪಟ್ಟು ಬೆಳೆದಿದ್ದ ತೆಂಗಿನ ಮರಗಳನ್ನು ಆನೆ ಹಿಂಡು, ಸೊಂಡಿಲಿಂದ ಸೀಳಿ ತಿಂದು ಹಾಳು ಮಾಡಿವೆ. ಇದರಿಂದ ಜೀವನಾಧಾರವಾಗಿದ್ದ ಕಲ್ಪತರು ಕಳೆದುಕೊಂಡು ರೈತ ಕಂಗಾಲಾಗಿದ್ದಾರೆ. ನಲವತ್ತಕ್ಕೂ ಹೆಚ್ಚು ಕಾಡಾನೆ ಹಿಂಡು, ಹತ್ತಾರು ಎಕರೆ ಪ್ರದೇಶದಲ್ಲಿ ಬೆಳೆದಿದ್ದ ನೂರಾರು ತೆಂಗಿನ ಮರಗಳನ್ನು ನಾಶ ಮಾಡಿವೆ. ಕಳೆದ ಒಂದು ತಿಂಗಳ ಹಿಂದೆಯೂ ನೂರಕ್ಕೂ ಹೆಚ್ಚು ತೆಂಗಿನ ಮರಗಳನ್ನು ನಾಶ ಮಾಡಿದ್ದ ಕಾಡಾನೆಗಳು, ಪುನಃ ಇಂದು ಮುಂಜಾನೆ ಸಹ ದಾಳಿ ಮಾಡಿವೆ, ಅಪಾರ ಪ್ರಮಾಣದ ಫಸಲು, ಮರ ಹಾಳು ಮಾಡಿವೆ. ತೆಂಗಿನ ಮರಗಳನ್ನು ಕಳೆದುಕೊಂಡು ಅನ್ನದಾತ ಕಣ್ಣೀರಿಡುತ್ತಿದ್ದಾರೆ. ಮಾಹಿತಿ ನೀಡಿದರೂ, ಅರಣ್ಯ ಇಲಾಖೆ ಇಟಿಎಫ್ ಸಿಬ್ಬಂದಿಯಾಗಲೀ, ಅಧಿಕಾರಿಗಳಾಗಲೀ ಸ್ಥಳಕ್ಕೆ ಬಂದಿಲ್ಲ ಎಂದು ಸ್ಥಳೀಯರು ಆಕ್ರೋಶ ಹೊರ ಹಾಕಿದರು.

ರೇವಣ್ಣ ಆರೋಪ ಸುಳ್ಳು : ಮಾಯಣ್ಣ

ಹಾಸನ: ಹೊಳೆನರಸೀಪುರ ರಸ್ತೆಯ ಕೆಐಎಡಿಬಿ ಪ್ರದೇಶದಲ್ಲಿ ನಿರ್ಮಾಣವಾಗಿರುವ ಪುಷ್ಪಗಿರಿ ವೇರ್ ಹೌಸ್ ವಿಚಾರದಲ್ಲಿ ಯಾವುದೇ ಅಕ್ರಮ ಮಾಡಿಲ್ಲ, ಆದರೂ ಮಾಜಿ ಸಚಿವ ಎಚ್.ಡಿ.ರೇವಣ್ಣ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದು ಮಾಲೀಕ ಮಾಯಣ್ಣಗೌಡ ತಿರುಗೇಟು ನೀಡಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾನೂನು ಪ್ರಕಾರವೇ ನಾವು ನಿವೇಶನ ಪಡೆದು ಯೋಜನೆ ಶುರು ಮಾಡಿದ್ದೇವೆ. ಆದರೂ ಅಕ್ರಮ ನಡೆದಿದೆ ಎಂದು ರೇವಣ್ಣ ಅವರು ಸುಳ್ಳಾಡುತ್ತಿದ್ದಾರೆ ಎಂದು ಕಿಡಿ ಕಾರಿದರು. ಹಿಂದೆ ಸದರಿ ಪ್ರದೇಶ ಗೋಮಾಳ ಎಂದು ಅಲ್ಲಿಯ ಜನರನ್ನು ಎತ್ತಿಕಟ್ಟಿ, ಪ್ರಚೋದನೆ ನೀಡಿದರು.ರೈತರಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಕೂಗೆಬ್ಬಿಸಿದರು. ಆದರೆ ನಾವು ಯಾವುದೇ ರೀತಿಯ ಅಕ್ರಮ ಮಾಡಿಲ್ಲ. 2023 ರಲ್ಲಿ ಹೈಕೋರ್ಟ್ ಸಹ ನಮ್ಮ ಪರವಾಗಿಯೇ ತೀರ್ಪು ನೀಡಿದೆ ಎಂದರು. ಕೇವಲ ರಾಜಕೀಯ ದುರುದ್ದೇಶ ದಿಂದ ಇಲ್ಲಸಲ್ಲದ ಆರೋಪ ಮಾಡುವುದು ಸರಿಯಲ್ಲ ಎಂದು ಟಾಂಗ್ ನೀಡಿದರು. ನಮ್ಮನ್ನು ಗಿರಾಕಿಗಳು ಅಂತಾರೆ, ಇದೇ ಮಾತನ್ನು ನಾವು ಅವರಿಗೆ ಹೇಳಿದ್ರೆ ಏನಾಗಲಿದೆ ಎಂದ ಮಾಯಣ್ಣ, ರೇವಣ್ಣ ಅವರು ಜಿಲ್ಲೆ ಮಾತ್ರವಲ್ಲದೆ ಹೊರಗಡೆಯೂ ನೂರಾರು ಎಕರೆ ಆಸ್ತಿ ಮಾಡಿದ್ದಾರೆ. ಅದೇನು ಆಲೂಗೆಡ್ಡೆ, ರಾಗಿ ಬೆಳೆದು ಸಂಪಾದನೆ ಮಾಡಿದ್ದಾ ಎಂದು ಕೇಳಿದರು. ಅವರು ಏನೆಲ್ಲಾ ಅನ್ಯಾಯ, ಅಕ್ರಮ ಮಾಡಿದ್ದಾರೆ ಎಂಬುದು ಜಗತ್ತಿಗೇ ಗೊತ್ತು ಎಂದು ತಿರುಗೇಟು ನೀಡಿದರು.

ಗೆಜೆಟಿಯರ್
ಪ್ರತಿ ಮಂಗಳವಾರ
ಇದು ಅನುಕ್ಷಣದ ಆ್ಯಪ್

ಮುಖ್ಯ ಶಿಕ್ಷಕರಿಗೆ, ಅಧಿಕಾರಿಗಳಿಗೆ ಸಭೆ | ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಸೂಚನೆ

ಎಸ್ಸೆಸ್ಸೆಲ್ಸಿ ಫಲಿತಾಂಶ ಗುಣಾತ್ಮಕವಾಗಿರಲಿ

ಚಿಕ್ಕಬಳ್ಳಾಪುರ: ಈ ಬಾರಿ ಜಿಲ್ಲೆಯ ಎಸ್ಸೆಸ್ಸೆಲ್ಸಿ ಪರೀಕ್ಷೆಯ ಫಲಿತಾಂಶ ವಿದ್ಯಾರ್ಥಿಗಳ ಉತ್ತೀರ್ಣಕ್ಕೆ ಮಾತ್ರ ಸೀಮಿತವಾಗಿರದೆ ಗುಣಾತ್ಮಕ ಫಲಿತಾಂಶವಾಗಿ ಹೊರಹೊಮ್ಮಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಮುಖ್ಯಶಿಕ್ಷಕರಿಗೆ ಹಾಗೂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರ ಹೊರವಲಯ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಪಂ ಹಾಗೂ ಶಿಕ್ಷಣ ಇಲಾಖೆ, ಎ.ಸಿ.ಸಿ ಸಿಮೆಂಟ್ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ, ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ ಮತ್ತು ವಿದ್ಯಾರ್ಥಿಗಳಿಗೆ ಕಲಿಕಾ ಸಮೃದ್ಧಿ ಪುಸ್ತಕ ಹಸ್ತಾಂತರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಸ್.ಎಸ್.ಎಲ್.ಸಿ ಫಲಿತಾಂಶವನ್ನು ಯಾವ ರೀತಿ ಉತ್ತಮ ಪಡಿಸಬೇಕು ಎನ್ನುವ ಹಿನ್ನೆಲೆಯಲ್ಲಿ ಈ ಸಭೆಗಳು ಸಹಾಯಕವಾಗಿವೆ. ಒಂದು ಶಾಲೆಯ ಫಲಿತಾಂಶಕ್ಕೆ ಹಿನ್ನಡೆಯಾದರೂ ಜಿಲ್ಲಾಡಳಿತ ಹೊಣೆಗಾರಿಕೆ ಹೊರಬೇಕಾಗಿರುತ್ತದೆ ಎಂದರು.

ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಯನ್ನು ಮುಂದಿರುವ ವಿದ್ಯಾರ್ಥಿಯೊಡನೆ ಸಂಯೋಜನೆ ಮಾಡಬೇಕು .ಕಲಿಕೆಯಲ್ಲಿ ಮುಂದಿರುವ ವಿದ್ಯಾರ್ಥಿಗಳನ್ನು ಇನ್ನಷ್ಟು ಪ್ರೋತ್ಸಾಹಿಸಿ ಗುಣಮಟ್ಟವನ್ನು ಹೆಚ್ಚಿಸಬೇಕು. ಕಲಿಕೆಯಲ್ಲಿ ಹಿಂದುಳಿದಿರುವ ಮಕ್ಕಳ ಮಾನಸಿಕ ಸಾಮರ್ಥ್ಯ ಅರ್ಥ ಮಾಡಿಕೊಂಡು ಅವರಿಗೆ ಅರ್ಥೈಸುವ ರೀತಿ ಸರಳ ವಿಧಾನದಲ್ಲಿ ತಿಳಿಸಿಕೊಟ್ಟು ಅವರ ಬರವಣಿಗೆ ಶೈಲಿ ಗಮನಿಸಿ ತಿದ್ದಬೇಕು. ಶಿಕ್ಷಕರು ನಿಗಾವಹಿಸುವಂತೆ ತಾಕೀತು ಮಾಡಿದರು.

ಪ್ರತಿ 15 ದಿನಗಳಿಗೊಮ್ಮೆ ಪೋಷಕರ ಸಭೆ ನಡೆಸಿ ಮಕ್ಕಳ ಕಲಿಕಾ ಪ್ರಗತಿ ಪೋಷಕರಿಗೆ ತಿಳಿಸಬೇಕು. ವಿಶೇಷ ತರಗತಿ ಹಮ್ಮಿಕೊಳ್ಳಬೇಕು.' ಅಧಿಕಾರಿಗಳಿಗೆ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಜವಾಬ್ದಾರಿ ನೀಡಲಾಗಿದೆ. ಫಲಿತಾಂಶ ವೃದ್ಧಿಗಾಗಿ ಕ್ರಮಗಳ ಬಗ್ಗೆ ಪರಿಶೀಲಿಸಿ ಸೂಕ್ತ ಮಾರ್ಗದರ್ಶನ ನೀಡಬೇಕು. ಶೈಕ್ಷಣಿಕ ಪ್ರಗತಿಯ ಬಗ್ಗೆ ಚರ್ಚೆ ನಡೆಸಬೇಕು ಎಂದು ಸಲಹೆ ನೀಡಿದರು.

ಜಿಲ್ಲೆಯ ಶಾಸಕರು ವಿದ್ಯಾರ್ಥಿಗಳ ಕಲಿಕಾ ಪ್ರಕ್ರಿಯೆಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದ್ದಾರೆ. ಈಗಗಾಲೇ ಚಿಕ್ಕಬಳ್ಳಾಪುರ ಶಾಸಕರು ಸರಣಿ ಘಟಕ ಪರೀಕ್ಷೆ ನಡೆಸುತ್ತಿದ್ದಾರೆ. ಇದೇ ಮಾದರಿಯಲ್ಲಿ ಇತರ ಶಾಸಕರು ನಡೆಸಲು ಸಹಕಾರ ನೀಡುತ್ತಿದ್ದಾರೆ ಎಂದು ತಿಳಿಸಿದರು.

ಬಿ.ಇ.ಒ ಹಾಗೂ ನೋಡಲ್ ಅಧಿಕಾರಿಗಳು ಶಾಲೆಗಳ ಸ್ಥಿತಿಗತಿಗಳ ಕುರಿತು ವರದಿ ನೀಡಬೇಕು ಕಳೆದ ಬಾರಿಗಿಂತ ಉತ್ತಮ ಸ್ಥಾನವನ್ನು ಜಿಲ್ಲೆ ಗಳಿಸುವಂತಾಗಲು ಶ್ರಮಿಸಬೇಕೆಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

ಇದೇ ವೇಳೆ 5000 ಸಾವಿರ ವಿದ್ಯಾರ್ಥಿಗಳಿಗೆ 30,000 ಕಲಿಕಾ ಸಂಜೀವಿನಿ ಪುಸ್ತಕಗಳನ್ನು ವಿತರಿಸಿ, ಎಸಿಸಿ ಸಿಮೆಂಟ್ ಕಂಪನಿ ವ್ಯವಸ್ಥಾಪಕ ಪ್ರಶಾಂತ್ ದೇಶ್ ಮುಖ್ ಅವರನ್ನು ಜಿಲ್ಲಾಧಿಕಾರಿಗಳು ಸನ್ಮಾನಿಸಿದರು.

ಜಿಪಂ ಮುಖ್ಯಕಾರ್ಯನಿರ್ಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಡಿಡಿಪಿಐ ಮುನಿಕೆಂಪೇಗೌಡ, ಬಿಇಒಗಳಾದ ಡಿ.ಎನ್ ಸುಕನ್ಯಾ, ಉಮಾದೇವಿ, ವೆಂಕಟೇಶಪ್ಪ, ಶ್ರೀನಿವಾಸ್ ಮೂರ್ತಿ, ಕೃಷ್ಣಪ್ಪ, ನರೇಂದ್ರ ಕುಮಾರ್ ಉಪಸ್ಥಿತರಿದ್ದರು.

ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದಲ್ಲಿ ನಡೆದ ಎಸ್ಎಸ್ಎಲ್ಸಿ ಪರೀಕ್ಷಾ ಫಲಿತಾಂಶ ಸುಧಾರಣೆ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಉದ್ಘಾಟಿಸಿದರು. ಜಿಪಂ ಸಿಇಒ ಪ್ರಕಾಶ್ ಜಿ.ಟಿ ನಿಟ್ಟಾಲಿ, ಡಿಡಿಪಿಐ ಮುನಿಕೆಂಪೇಗೌಡ ಇದ್ದರು.

ಕಲಿಕಾ ಸಂಜೀವಿನಿ ಅಭ್ಯಾಸ ಪುಸ್ತಕ ವಿತರಣೆ

ಎ.ಸಿ.ಸಿ ಸಿಮೆಂಟ್ ಕಂಪನಿ ಸಹಯೋಗದಲ್ಲಿ ಶಿಕ್ಷಣ ಇಲಾಖೆಯು ಜಿಲ್ಲೆಯ 10ನೇ ತರಗತಿ ವಿದ್ಯಾರ್ಥಿಗಳಿಗೆ ಕಲಿಕಾ ಸಂಜೀವಿನಿ ಅಭ್ಯಾಸ ಪುಸ್ತಕಗಳನ್ನು ವಿತರಿಸುತ್ತಿದ್ದು, ಶಿಕ್ಷಕರು ತಪ್ಪದೆ ಅಭ್ಯಾಸ ಮಾಡಿಸಬೇಕು. ಮಕ್ಕಳು ದಿನ ಕನಿಷ್ಠ ಮೂರು ಗಂಟೆ ಅಭ್ಯಾಸ ಮಾಡುವುದನ್ನು ಖಾತ್ರಿಪಡಿಸಿಕೊಳ್ಳುವುದು ಶಿಕ್ಷಕರ ಜವಾಬ್ದಾರಿ ಎಂದು ಡಿಸಿ ಹೇಳಿದರು.

ಅಯೋಡಿನ್ ಕೊರತೆಗೆ ಜಾಗೃತಿ ಅಧಿವೇಶನ

ಗುಬ್ಬಿ: ಸ್ವಾಮಿ ವಿವೇಕಾನಂದರ ಜಯಂತಿ ಹಾಗೂ ರಾಷ್ಟ್ರೀಯ ಯುವ ದಿನ ಅಂಗವಾಗಿ ನಿಟ್ಟೂರು ಹೋಬಳಿ ಕುಂದರನಹಳ್ಳಿ ಗೇಟ್ ಬಳಿಯ ರಂಗನಾಥ ಗ್ರಾಮಾಂತರ ಪ್ರೌಢಶಾಲೆಯಲ್ಲಿ ಅಯೋಡಿನ್ ಕೊರತೆ ಅಸ್ವಸ್ಥತೆ ಕುರಿತು ಅಧಿವೇಶನ ಆಯೋಜಿಸಲಾಗಿತ್ತು.

ಬೆಂಗಳೂರಿನ ಐಜಿಡಿ ಸಂಸ್ಥೆ ಆಯೋಜಿಸಿದ್ದ ರಾಷ್ಟ್ರೀಯ ಯುವ ದಿನ ಹಾಗೂ ಅಯೋಡಿನ್ ಕೊರತೆ ಅಸ್ವಸ್ಥತೆ ಅಧಿವೇಶನದಲ್ಲಿ ನೂರಾರು ಮಕ್ಕಳು ಆರೋಗ್ಯ ಜಾಗೃತಿ ಬಗ್ಗೆ ಸಾಕಷ್ಟು ಮಾಹಿತಿ ಹಾಗೂ ಅಯೋಡಿನ್ ಕೊರತೆಯಿಂದ ಆಗುವ ದುಷ್ಪರಿಣಾಮ ಬಗ್ಗೆ ತಿಳಿಸಲಾಯಿತು.

ಐಜಿಡಿ ಸಂಸ್ಥೆಯ ಡಾ.ಸುಷ್ಮಾ ಮಾತನಾಡಿ, ಮಾನಸಿಕ ಆರೋಗ್ಯಕ್ಕೆ ಸಮಸ್ಯೆ ನೀಡುವ ಅಯೋಡಿನ್ ಕೊರತೆ ಮನುಷ್ಯನಲ್ಲಿ ನಾನಾ ರೋಗಗಳಿಗೆ ಮೂಲವಾಗಿದೆ. ಮೈಕ್ರೋ ನ್ಯೂಟ್ರಿನ್ ಅವಶ್ಯಕತೆ ಬಗ್ಗೆ ಸಹ ಮಕ್ಕಳು ತಿಳಿಯಬೇಕು ಎಂದ ಅವರು ಉಪ್ಪಿನ ದ್ರಾವಣ ಅಂಶ ಸೇವನೆ ಕಡಿಮೆಯಾಗದಂತೆ ಗಮನಹರಿಸಬೇಕು. ಕೆಲ ಪ್ರದೇಶದಲ್ಲಿ ಮಣ್ಣಿನಲ್ಲಿ ಅಯೋಡಿನ್ ಕಡಿಮೆ ಇದ್ದು ಅಲ್ಲಿನ ಬೆಳೆಗಳ ತಿನ್ನುವರಲ್ಲಿ ಅಯೋಡಿನ್ ಕೊರತೆ ಕಾಣುತ್ತದೆ. ಸಮುದ್ರಾಹಾರ ಸೇವನೆ ಮಾಡುವುದು ಉತ್ತಮ ಎಂದರು. ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ನಟರಾಜು,ಐಜಿಡಿ ಸಂಸ್ಥೆಯ ಕ್ಷೇತ್ರ ಮಾರ್ಗದರ್ಶಕ ಶಿವರಾಜ್, ಎಸ್.ಡಿ.ಕುಮಾರ್, ಪೂರ್ಣಿಮಾ, ತನುಜ್ ಕುಮಾರ್, ಐಜಿಡಿ ಸಂಸ್ಥೆಯ ಜಿಲ್ಲಾ ಸಂಯೋಜಕರಾದ ರಾಜಶ್ರೀ, ಎಚ್ ಆರ್ ನವೀನ್ ಕುಮಾರ್ ಇದ್ದರು.

ಅಯೋಡಿನ್ ಕೊರತೆ ಕುರಿತು ಅಧಿವೇಶನ ನಡೆಯಿತು.

ಶಾಸಕ ಪಪ್ಪಿ ಕಾರು ಡಿಕ್ಕಿ: ಪ್ರಕರಣ ದಾಖಲು, ವಶ

ನೆಲಮಂಗಲ: ಚಿತ್ರದುರ್ಗದ ಶಾಸಕ ಕೆ.ಸಿ. ವೀರೇಂದ್ರ, ಪಪ್ಪಿ ಅವರ ಬೆಂಜ್ ಕಾರು ರಸ್ತೆ ದಾಟುತ್ತಿದ್ದ ಓಂ ಶಕ್ತಿ ಮಾಲಾಧಾರಿಗಳಿಗೆ ಡಿಕ್ಕಿ ಹೊಡೆದಿದ್ದು ಚಾಲಕನ ನಿರ್ಲಕ್ಷ್ಯದಿಂದ ಅಪಘಾತ ಸಂಭವಿಸಿದೆ ಎಂದು ಆರೋಪಿಸಲಾಗಿದೆ. ಗಾಯಾಳುಗಳನ್ನು ಆಸ್ಪತ್ರೆಗೆ ಸೇರಿಸಲಾಗಿದೆ. ಪ್ರಕರಣ ದಾಖಲಾಗಿದ್ದು ಅಪಘಾತಕ್ಕೀಡಾದ ಕಾರನ್ನು ಜಪ್ತಿ ಮಾಡಲಾಗಿದೆ.

ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಓಂಶಕ್ತಿ ಮಾಲಾಧಾರಿಗಳು ಗಂಭೀರ ಗಾಯಗೊಂಡಿದ್ದಾರೆ. ಸದ್ಯ ಈ ಘಟನೆಗೆ ಸಂಬಂಧಿಸಿದಂತೆ ಅಜಾಗರೂಕತೆ ಚಾಲನೆ ಆರೋಪದಡಿ ಎಫ್ಐಆರ್ ದಾಖಲಾಗಿದೆ. ಬೆಂಜ್ ಕಾರನ್ನು ಜಪ್ತಿ ಮಾಡಲಾಗಿದೆ.

ಬೆಳಿಗ್ಗೆ 9:25ರ ಸುಮಾರಿಗೆ ಒಟ್ಟು ಮೂರು ಕಾರುಗಳ ಮುಖಾಂತರ ಬೆಂಗಳೂರಿಗೆ ಬರುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ.

ಮುಂದಿನ ಕಾರಿನಲ್ಲಿ ಕಾಂಗ್ರೆಸ್ ಶಾಸಕ ವೀರೇಂದ್ರ, ಪಪ್ಪಿ ತೆರಳುತ್ತಿದ್ದರು. ಅಪಘಾತ ನಂತರ ವೀರೇಂದ್ರ, ಪಪ್ಪಿ ಕಾರಿನಲ್ಲೇ ಪತ್ನಿ ಚೈತ್ರಾ ಬೆಂಗಳೂರಿಗೆ ತೆರಳಿದ್ದಾರೆ. ಬೆಂಜ್ ಕಾರಿನಲ್ಲೇ ಗಾಯಳುಗಳನ್ನು ಪಿಎ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದಾರೆ.

ಗಾಯಳು ಪ್ರತಿಕ್ರಿಯಿಸಿ, ರಸ್ತೆ ದಾಟಲು ನಿಂತಿದ್ದ ವೇಳೆ ಏಕಾಏಕಿ ಕಾರು ಬಂದು ನಮ್ಮ ಅತ್ತೆ ಹಾಗೂ ನನಗೆ ಡಿಕ್ಕಿಯಾಗಿದೆ. ಆಮೇಲೆ ನನಗೆ ಏನಾಯಿತು ಗೊತ್ತಿಲ್ಲ. ಅವರ ಕಾರಿನಲ್ಲೇ ನಮ್ಮನ್ನ ಆಸ್ಪತ್ರೆಗೆ ಕರಕೊಂಡು ಬಂದು ಚಿಕಿತ್ಸೆಗೆ ಸೇರಿಸಿದ್ದಾರೆ. ನನಗೆ ತಲೆ, ಕೈ, ಕಾಲು ಮತ್ತು ಮುಖಕ್ಕೆ ಗಾಯಗಳಾಗಿವೆ ಎಂದು ಹೇಳಿದ್ದಾರೆ.

ಶಾಸಕ ವೀರೇಂದ್ರ, ಪಪ್ಪಿ ಅವರ ಪತ್ನಿ ಚೈತ್ರ ಅವರು ಹಿರಿಯ ನಟ ದೊಡ್ಡಣ್ಣರ ಮಗಳು. ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ಪಟೇಲ್ ಶಿವರಾಂ ವಿಧಿವಶ: ಗಣ್ಯರ ಕಂಬನಿ

ಹಾಸನ:ಜಿಲ್ಲೆಯ ಹಿರಿಯ ರಾಜಕೀಯ ಮುಖಂಡ, ಜಿಲ್ಲಾ ಪರಿಷತ್, ವಿಧಾನ ಪರಿಷತ್ ಮಾಜಿ ಸದಸ್ಯ ಹಾಗೂ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಪರಮಾಪ್ತ ಪಟೇಲ್ ಶಿವರಾಂ(77) ಗುರುವಾರ ಬೆಳಗ್ಗೆ ವಿಧಿವಶರಾದರು.

ಕಳೆದ ಹಲವು ತಿಂಗಳಿಂದ ವಯೋಸಹಜ ಅನಾರೋಗ್ಯದಿಂದ ಕುವೆಂಪು ನಗರದ ಹೌಸಿಂಗ್ ಬೋರ್ಡ್‌ನಲ್ಲಿರುವ ತಮ್ಮ ನಿವಾಸದಲ್ಲೇ ಉಳಿದಿದ್ದ ಶಿವರಾಂ ಅವರು, ಇಂದು ಮುಂಜಾನೆ 4.30ರ ಸುಮಾರಿಗೆ ಕೊನೆಯುಸಿರೆಳೆದರು. ಈ ಮೂಲಕ ಹಿರಿಯ ರಾಜಕಾರಣಿಯೊಬ್ಬರನ್ನು ಜಿಲ್ಲೆ ಕಳೆದುಕೊಂಡಿದೆ.

1980 ರ ದಶಕದಲ್ಲಿ ಆಗಿದ್ದ ಜಿಲ್ಲಾ ಪರಿಷತ್ ಚುನಾವಣೆಯಲ್ಲಿ ಸ್ಪರ್ಧೆ ಮಾಡಿದ ಪಟೇಲ್ ಶಿವರಾಂ ಮೊದಲ ಪ್ರಯತ್ನದಲ್ಲೇ ಚುನಾಯಿತರಾಗಿ ನಂತರ ಸಾಲಗಾಮೆ ಬಾಲಕೃಷ್ಣಮೂರ್ತಿ ಬಳಿಕ ನಾಲ್ಕು ವರ್ಷಗಳ ಕಾಲ ಅಧ್ಯಕ್ಷರೂ ಆಗಿ ಸೇವೆ ಸಲ್ಲಿಸಿದರು.

2006 ರಿಂದ ಜಿಲ್ಲಾ ಸಹಕಾರಿ ಬ್ಯಾಂಕ್ ಅಧ್ಯಕ್ಷರಾಗಿ ರೈತರು, ಗ್ರಾಹಕರ ಆಶೋತ್ತರಗಳಿಗೆ ಸ್ಪಂದಿಸಿದರು. ಕ್ರಿಪ್ಕೋ ಸದಸ್ಯರೂ ಆಗಿದ್ದ ಶಿವರಾಂ ಅವರು, ಜಿಲ್ಲೆಯ ಸ್ಥಳೀಯ ಸಂಸ್ಥೆಗಳಿಂದ ವಿಧಾನ ಪರಿಷತ್ ಸದಸ್ಯರೂ ಆದರು. ಹಾಲಿ ಅಪೆಕ್ಸ್ ಬ್ಯಾಂಕ್ ನಿರ್ದೇಶಕರಾಗಿದ್ದರು. ಇತ್ತೀಚೆಗೆ ರಾಜ್ಯಮಟ್ಟದ ಸಹಕಾರ ರತ್ನ ಪ್ರಶಸ್ತಿ ಸಹ ಇವರಿಗೆ ಒಲಿದಿತ್ತು. ಶಿವರಾಂ ಅವರು ಮೂವರು ಪುತ್ರಿಯರು, ಒಬ್ಬ ಮಗ ಹಾಗೂ ಅಪಾರ ಬಂಧು ಬಳಗ ಅಗಲಿದ್ದಾರೆ. ಮಧ್ಯಾಹ್ನ ನಂತರ ಮೃತರ ಅಂತ್ಯಕ್ರಿಯೆ ಮೃತರ ಸ್ವಗ್ರಾಮ ದೊಡ್ಡಗೇಣಿಗೆರೆಯಲ್ಲಿ ನೆರವೇರಿತು. ಮಾಜಿ ಸಚಿವ ಹೆಚ್.ಡಿ.ರೇವಣ್ಣ, ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಮೆರವಣಿಗೆ ಉದ್ದಕ್ಕೂ ಭಾಗಿಯಾದರು.

ಅಂತಿಮ ದರ್ಶನ: ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಮಾಜಿ ಸಚಿವ ಬಿ.ಶಿವರಾಂ, ಶಾಸಕರಾದ ಹೆಚ್.ಡಿ.ರೇವಣ್ಣ, ಸ್ವರೂಪ್ ಪ್ರಕಾಶ್, ಸಿಮೆಂಟ್ ಮಂಜು, ಸಿ.ಎನ್.ಬಾಲಕೃಷ್ಣ, ಕೆ.ಎಂ.ಶಿವಲಿಂಗೇಗೌಡ, ಮಾಜಿ ಶಾಸಕರಾದ ಎ.ಟಿ.ರಾಮಸ್ವಾಮಿ, ಪ್ರೀತಂ ಜೆ.ಗೌಡ, ಹೆಚ್.ಕೆ.ಕುಮಾರಸ್ವಾಮಿ, ಕೆ.ಎಸ್.ಲಿಂಗೇಶ್, ಎಂ.ಎ. ಗೋಪಾಲಸ್ವಾಮಿ, ನಗರಸಭೆ ಅಧ್ಯಕ್ಷ ಎಂ.ಚಂದ್ರೇಗೌಡ ಮೊದಲಾದವರು ಪಟೇಲ್ ಶಿವರಾಂ ಅವರ ಅಂತಿಮ ದರ್ಶನ ಪಡೆದರು. ದೇವೇಗೌಡರು, ರೇವಣ್ಣ, ಸ್ವರೂಪ್ ಪ್ರಕಾಶ್ ಅವರು ಕಣ್ಣೀರಿಟ್ಟರು.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಅಂತಿಮ ದರ್ಶನ ಪಡೆದರು.

ನಮ್ಮ ತಂದೆಯವರ ಆತ್ಮೀಯರೂ ಆಗಿದ್ದ ಹಿರಿಯರಾದ ಪಟೇಲ್ ಶಿವರಾಂ ಅಗಲಿಕೆ ವೈಯಕ್ತಿಕವಾಗಿ ಅತೀವ ದುಃಖ ತಂದಿದೆ. ಆರಂಭದಿಂದ ಕಡೆಯವರೆಗೂ ನಮ್ಮ ಪಕ್ಷದಲ್ಲೇ ಇದ್ದ ಶಿವರಾಂ ಅವರು, ಜಿಲ್ಲೆಯಲ್ಲಿ ನಮ್ಮ ಪಕ್ಷ ಸಂಘಟನೆಗೆ ಅತ್ಯಂತ ಪ್ರಾಮಾಣಿಕವಾಗಿ ದುಡಿದಿದ್ದರು. ಅವರ ಮಾರ್ಗದರ್ಶನದಿಂದ ನಾನೂ ಸಾಕಷ್ಟು ಕಲಿತಿದ್ದೇನೆ. ಅವರ ಆತ್ಮಕ್ಕೆ ದೇವರು ಚಿರಶಾಂತಿ ಕರುಣಿಸಲಿ. ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ.

-ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ

IN THE COURT OF THE CIVIL JUDGE & JMFC AT KORATAGERE
C.MIS.No. 419 /2024

Petitioners:- 1. Manjula W/o Harisha D/o Chinnojirao,51 years, 2. Ratnabai W/o Late Chinnojirao Aged about 51 years, R/o Shiragonahalli, Holavanahalli Hobli, Koratagere taluk.
V/S
Respondent:- The Tahasildar The Registar of Birth & death, Koratagere Taluk.

PUBLIC NOTIFICATION

Whereas the petitioners have filed the above petition to obtain the death certificate of the 1st petitioner's Father by name Chinnojirao S/o Gangojirao died on 29-05-2011 and mother by name Shanthabai W/o Chinnojirao died on 2-08-2002 at Koratagere taluk, Holavanahalli Hobli, Shiragonahalli. it is hereby notify that whoever has interest or objection to obtain the death certificate of the petitioner father and Mother may appear, in person or thtough your advocate on 22/02/2025 in the above case. Falling which the matter will be herd written mined in your absence.

By the order of Court
Shirastedar,
Civil Judge & JMFC AT KORATAGERE.
Advocate for petitioner,
D.G.Thimmaraju, Koratagere.

IN THE COURT OF THE CIVIL JUDGE & JMFC AT KORATAGERE
C.MIS.No. 415/2024

Petitioners:- Rangashamaiah S/o Late Kodappa, 75 years, R/o Bidaloti Village, Holavanahalli Hobli, Koratagere Taluk.
V/S
Respondent:- The Tahasildar The Registar of Birth & death, Koratagere taluk.

PUBLIC NOTIFICATION

Whereas the petitioner have filed the above petition to obtain the death certificate of the petitioner's Father by name Kodappa S/o Late Kodirangaiah died on 28-03-1988 and mother by name Lakshmamma W/o Kodappa died on 20-05-1970 at Koratagere taluk, Holavanahalli Hobli, Bidaloti. It is hereby notify that whoever has interest or objection to obtain the death certificate of the petitioner father and Mother may appear in person or through your advocate on: 22/02/-2025 in the above case. Failing which the matter will be herd written mined in your absence.

By the order of Court
Shirastedar,
Civil Judge & JMFC AT KORATAGERE.
Advocate for petitioner,
D.G.Thimmaraju, Koratagere.

IN THE COURT OF THE CIVIL JUDGE AND J.M.F.C. AT KORATAGERE
C.Mis No: 416/2024

PETITIONERS:- 1. Hanumakka W/o Late Chikkatimmaiah Aged about 65 years, 2. Sakamma W/o Late Chikkathimmaiah Aged about 61 years, 3. Anant Kumar S/o Late Chikkathimmaiah Aged about 30 years. Both are R/o of Rayavara Village, Holavanahalli Hobli, Koratagere Taluk. Tumakuru Dist.
V/s
RESPONDENT:- The Tahasildar, Registrar of Birth and Death, Koratagere Taluk, Koratagere.

PUBLIC NOTIFICATION

Whereas the petitioners have filed the above petition to obtain the death certificate of the 1st petitioner and 2nd Petitioner Brother-in-law and 3rd petitioner Grand-Father by name Venkatappa S/o Kempanna was died on 20-12-2005 and 1st petitioner and 2nd Petitioner Sister-in-law and 3rd petitioner Grand-Mother by name Muddarangamma W/o Venkatappa was died on 02-08-2004 at Rayavara Village, Holavanahalli Hobli, Koratagere Taluk, Tumakuru Dist. If anybody has any objection or right with respect to the above said fact and petition may filed objection in the above said case by personally or by counsel. The case is posted on 22/02/2025 at 11-00 a.m. Otherwise the said matter will be disposed accordance with law.

Given under my hand and the seal of the court on this 07 day of 01 2025 at Koratagere.

By the order of Court
Shirastedar,
Civil Judge & JMFC AT KORATAGERE.
Advocate/Notary for petitioner,
S. K. Madhusudana Koratagere.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಹೊಳವನಹಳ್ಳಿ, ಕೊರಟಗೆರೆ ತಾಲ್ಲೂಕು

ಚುನಾವಣಾ ನೋಟೀಸ್

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಹೊಳವನಹಳ್ಳಿ, ಕೊರಟಗೆರೆ ತಾಲ್ಲೂಕು, ಈ ಸಂಘದ ದಿನಾಂಕ:–29.01.2025 ರಿಂದ ಮುಂದಿನ 5 (ಐದು) ವರ್ಷಗಳ ಅವಧಿಗೆ ದಿನಾಂಕ:–29.01.2025 ರಂದು ಬೆಳಗ್ಗೆ 9.00 ರಿಂದ ಮಧ್ಯಾಹ್ನ 4.00 ಗಂಟೆಯ ವರೆಗೆ ಸಹಕಾರ ಸಂಘದ ಕಛೇರಿ ಆವರಣದಲ್ಲಿ ಸಹಕಾರ ಸಂಘದ ಆಡಳಿತ ಮಂಡಲಿ ನಿರ್ದೇಶಕರುಗಳ ಆಯ್ಕೆಗೆ ಚುನಾವಣೆ ನಡೆಯಲಿದೆ ಚುನಾವಣಾ ವೇಳಾ ಪಟ್ಟಿಯನ್ನು ಎಲ್ಲಾ ಅರ್ಹ ಮತದಾರರಿಗೆ ಈಗಾಗಲೇ ತಲುಪಿಸಲಾಗಿದೆ. ಅರ್ಹ ಮತದಾರರ ಪಟ್ಟಿ ಮತ್ತು ಚುನಾವಣಾ ವೇಳಾ ಪಟ್ಟಿಯನ್ನು ಕಛೇರಿ ನಾಮಫಲಕದಲ್ಲಿ ಪ್ರಕಟಿಸಲಾಗಿರುತ್ತದೆ.

ಒಟ್ಟು 13 ನಿರ್ದೇಶಕರ ಸ್ಥಾನಗಳಿದ್ದು, ಚುನಾವಣೆ ಮುಖಾಂತರ 12 (ಹನ್ನೆರಡು) ನಿರ್ದೇಶಕರನ್ನು ಮಾತ್ರ ಚುನಾಯಿಸಬೇಕಾಗಿದೆ.

ಈ ಪೈಕಿ ಸಾಲಗಾರ ಸದಸ್ಯಕ್ಷೇತ್ರದಿಂದ 11 (ಹನ್ನೊಂದು) ಸ್ಥಾನಗಳು, ಸಾಲಗಾರ ಸದಸ್ಯಕ್ಷೇತ್ರದ 11 (ಹನ್ನೊಂದು) ಸ್ಥಾನಗಳ ಪೈಕಿ 05 ಸಾಮಾನ್ಯ ಸ್ಥಾನಗಳು, 01 ಸ್ಥಾನವನ್ನು ಪರಿಶಿಷ್ಟ ಜಾತಿ ಸದಸ್ಯರಿಗೆ 01 ಸ್ಥಾನವನ್ನು ಪರಿಶಿಷ್ಟ ಪಂಗಡದ ಸದಸ್ಯರಿಗೆ, 02 ಸ್ಥಾನಗಳು ಮಹಿಳೆಯರಿಗೆ ಮತ್ತು ಹಿಂದುಳಿದ ವರ್ಗದ ಸದಸ್ಯರಿಗೆ 02 ಸ್ಥಾನಗಳು ಇದರಲ್ಲಿ 'ಎ' ಮತ್ತು 'ಬಿ' ಪ್ರವರ್ಗಕ್ಕೆ ಒಂದೊಂದು ಸ್ಥಾನ ಮೀಸಲಾಗಿರುತ್ತದೆ. (ಮೀಸಲು ಸ್ಥಾನಕ್ಕೆ ಸ್ಪರ್ಧಿಸುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಇತ್ತೀಚಿನ ಜಾತಿ ದೃಢೀಕರಣ ಲಗತ್ತಿಸತಕ್ಕದ್ದು)

ಸಾಲಗಾರರಲ್ಲದ ಸದಸ್ಯಕ್ಷೇತ್ರದಿಂದ 01 (ಒಂದು) ಸ್ಥಾನ,

1. ಉಮೇದುವಾರಿಕೆ ಅರ್ಜಿ ಪಡೆಯಲು ಪ್ರಾರಂಭದ ದಿನಾಂಕ 19–01–2025 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆಯವರಿಗೆ
2. ನಾಮಪತ್ರಗಳನ್ನು ಸಲ್ಲಿಸಲು ಕಡೆಯ ದಿನಾಂಕ:–21–01–2025 ರಂದು ಬೆಳಿಗ್ಗೆ 11:00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆಯವರಿಗೆ
3. ನಾಮಪತ್ರ ಪರಿಶೀಲನೆ ದಿನಾಂಕ:–22.01.2025 ರಂದು ಬೆಳಿಗ್ಗೆ 11.00 ಗಂಟೆಗೆ ಸಂಘದ ಕಛೇರಿಯಲ್ಲಿ.
4. ನಾಮಪತ್ರ ವಾಪಸ್ಸು ಪಡೆಯಲು ಕೊನೆಯ ದಿನಾಂಕ:–23.01.2025 ರಂದು ಮಧ್ಯಾಹ್ನ 2.00 ಗಂಟೆಯವರೆಗೆ.
5. ನಾಮ ಪತ್ರದ ಅರ್ಜಿಗಳನ್ನು ಮತ್ತು ಮತದಾರರ ಪಟ್ಟಿಯನ್ನು ಸಂಘದ ಕಛೇರಿಯಲ್ಲಿ ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆಯವರಿಗೆ ವರೆಗೆ ಪಡೆಯಬಹುದು/ಸಲ್ಲಿಸಬಹುದು.
6. ಸದಸ್ಯರು ಸಹಕಾರಿಯಿಂದ ಗುರುತಿನಚೀಟಿ ಪಡೆದು ಚುನಾವಣಾ ವೇಳೆ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು
7. ಹೆಚ್ಚಿನ ಮಾಹಿತಿಗಾಗಿ ಸಹಕಾರಿಯ ಕಾರ್ಯದರ್ಶಿ ಅಥವಾ ರಿಟರ್ನಿಂಗ್ ಆಫೀಸರ್ ರವರನ್ನು ಸಂಪರ್ಕಿಸಬಹುದು.

ಸಹಿ/–
ರಿಟರ್ನಿಂಗ್ ಅಧಿಕಾರಿ
ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ
ನಿಯಮಿತ, ಹೊಳವನಹಳ್ಳಿ

ಕೊತ್ತೂರು ವಿರುದ್ಧ ಕ್ರಮ ಖಚಿತ:ಎಸ್ಪಿ ಭರವಸೆ

ಕೋಲಾರ: ಶಾಸಕ ಕೊತ್ತೂರು ಮಂಜುನಾಥ್ ಅವರ ಜಾತಿ ಪ್ರಮಾಣಪತ್ರದ ವಿಚಾರದಲ್ಲಿ ಕೆಲವು ದಾಖಲಾತಿಗಳು ಅಗತ್ಯವಿದ್ದು ಅವುಗಳನ್ನು ಹೈಕೋರ್ಟ್‌ನಿಂದ ಪಡೆದು ಕ್ರಮ ಕೈಗೊಳ್ಳಲಾಗುವುದು ಎಂದು ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ ಎಸ್ಪಿ ಆನಂದ ಕುಮಾರ್ ಹೇಳಿದರು.

ಮಂಜುನಾಥ್ ಬಂಧನಕ್ಕೆ ಆಗ್ರಹಿಸಿ ದಲಿತ ಸಂಘಟನೆಗಳ ಮಹಾ ಒಕ್ಕೂಟದ ಜಿಲ್ಲಾಧ್ಯಕ್ಷ ಹೂಹಳ್ಳಿ ಪ್ರಕಾಶ್ ನೇತೃತ್ವದ ತಂಡ ಸಲ್ಲಿಸಿದ ಮನವಿ ಸ್ವೀಕರಿಸಿದ ನಂತರ ನಿಯೋಗದೊಂದಿಗೆ ಮಾತನಾಡಿದರು.

ಪ್ರಕರಣ ತನಿಖೆ ಹಂತದಲ್ಲಿದ್ದು ವಿವರಗಳನ್ನು ನೀಡಲು ಸಾಧ್ಯವಿಲ್ಲವಾದರೂ ಕ್ರಮ ಖಂಡಿತವಾಗಿ ಆಗುತ್ತದೆಂದರು. ತನಿಖೆ ಮುಗಿದ ತಕ್ಷಣ ಮುಂದಿನ ಕ್ರಮ ಕೈಗೊಳ್ಳಲಾಗುವುದು. ನಿಮ್ಮ ಬೇಡಿಕೆ ಕುರಿತು ಮತ್ತು ಪ್ರಕರಣದಲ್ಲಿ ಈವರೆಗೆ ಕೈಗೊಂಡಿರುವ ಕ್ರಮಗಳ ಕುರಿತು ಎಡಿಜಿಪಿ ಅವರಿಗೆ ವಿಸ್ತತ ವರದಿ ಸಲ್ಲಿಸಲಾಗುತ್ತದೆ ಎಂದು ತಿಳಿಸಿದರು. ಮುಖಂಡ ದಲಿತ್ ನಾರಾಯಣಸ್ವಾಮಿ ಮಾತನಾಡಿ, ಶಾಸಕ ಮಂಜುನಾಥ್ ವಿರುದ್ಧ ಹೋರಾಟ ಮುಂದುವರೆಯಲಿದ್ದು 22 ರಂದು ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ ವಿರುದ್ಧ ಧರಣಿ ನಡೆಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಒಕ್ಕೂಟದ ಜಿಲ್ಲಾಧ್ಯಕ್ಷ ಹೂಹಳ್ಳಿ ಪ್ರಕಾಶ್ ಮಾತನಾಡಿ, ಮುಳಬಾಗಲು ಕೋರ್ಟ್‌ನಿಂದ ಹಿಡಿದು ಸುಪ್ರಿಂ ಕೋರ್ಟ್‌ವರೆಗೆ ಕೊತ್ತೂರು ಮಂಜುನಾಥ್ ವಿರುದ್ಧ ತೀರ್ಪು ಬಂದಿದ್ದರೂ ಸರಕಾರ ಕ್ರಮ ಕೈಗೊಂಡಿಲ್ಲ. ಹೀಗಾಗಿ ಶುಕ್ರವಾರ ಎಡಿಜಿಪಿ ಅವರನ್ನು ಭೇಟಿ ಮಾಡಲು ಸಮಯ ನಿಗದಿ ಮಾಡಲಾಗಿದೆ ಎಂದು ನುಡಿದರು.

ದಲಿತ ಸಿಂಹ ಸೇನೆ ಹನುಮಾನ್, ಮುಖಂಡರಾದ ಮುರಳಿ,ಚೇತನ್ ಕುಮಾರ್, ಸಾಹುಕಾರ್ ಶಂಕರಪ್ಪ,ಅಮ್ಜದ ಪಾಷ, ಆಸೀಫ್ ಇದ್ದರು.

ಕೋಲಾರಕ್ಕೆ ಆಗಮಿಸಿದ ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ ಎಸ್ಪಿ ಆನಂದ ಕುಮಾರ್‌ರನ್ನು ದಲಿತ ಮುಖಂಡರು ಸ್ವಾಗತಿಸಿದರು.

ಕೃಷಿಕ ಸಮಾಜದ ಪ್ರತಿನಿಧಿ ಆಗಿ ಅವಿರೋಧ ಆಯ್ಕೆ

ರಾಮನಗರ: ಜಿಲ್ಲಾ ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿಯಾಗಿ ಹಿರಿಯ ವಕೀಲ, ಪ್ರಗತಿಪರ ರೈತ ಎಂ.ಕೆ.ನಿಂಗಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ರಾಮನಗರದ ಕೃಷಿ ಇಲಾಖೆ ಕಚೇರಿಯಲ್ಲಿ ಜಿಲ್ಲಾ ಸಮಿತಿ ಹಾಗೂ ರಾಜ್ಯ ಸಮಿತಿಗೆ ನಡೆದ ಚುನಾವಣೆ ಪ್ರಕ್ರಿಯೆಯಲ್ಲಿ ರಾಜ್ಯ ಪ್ರತಿನಿಧಿ ಸ್ಥಾನಕ್ಕೆ ಎಂ.ಕೆ. ನಿಂಗಪ್ಪ ಅವರನ್ನು ಹೊರತುಪಡಿಸಿ ಬೇರ್ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವರ ಆಯ್ಕೆಯನ್ನು ಚುನಾವಣಾಧಿಕಾರಿ ಘೋಷಣೆ ಮಾಡಿದರು.

ನೂತನವಾಗಿ ರಾಜ್ಯ ಸಮಿತಿಗೆ ಆಯ್ಕೆಯಾದ ಎಂ.ಕೆ.ನಿಂಗಪ್ಪ ಅವರನ್ನು ರೈತ ಮುಖಂಡರು ಅಭಿನಂದಿಸಿದರು. ರೈತರ ಪರವಾಗಿ ರಾಜ್ಯಮಟ್ಟದಲ್ಲಿ ಹೋರಾಟ ಮಾಡುವಂತೆ ಮನವಿ ಮಾಡಿದರು. ಕೃಷಿ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

ಪಿಡಿಒ ವಿರುದ್ಧ ಗ್ರಾಮಸ್ಥರ ಪ್ರತಿಭಟನೆ

ಚಿಕ್ಕಬಳ್ಳಾಪುರ: ಗ್ರಾಮಕ್ಕೆ ಸರಿಯಾದ ಮೂಲ ಸೌಲಭ್ಯ ಒದಗಿಸುವಂತೆ ಹೈಕೋರ್ಟ್ ಆದೇಶ ನೀಡಿದ್ದರೂ ನ್ಯಾಯಾಲಯದ ಆದೇಶ ಜಾರಿಗೊಳಿಸದೇ ಉಲ್ಲಂಘನೆ ಮಾಡಿದ್ದಾರೆಂದು ಆರೋಪಿಸಿ ಜಿಲ್ಲೆಯ ಮಂಚೇನಹಳ್ಳಿ ತಾಲೂಕಿನ ಗೌಡಗೆರೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲೋಕೇಶ್ ವಿರುದ್ಧ ಸಮತಾ ಸೈನಿಕದಳ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಸಮತಾ ಸೈನಿಕದಳದ ರಾಜ್ಯ ಪ್ರಧಾನ ಕಾರ್ಯದರ್ಶಿ ವೆಂಕಟೋಣಪ್ಪ , ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಶೇ.100 ರಷ್ಟು ದಲಿತರೇ ವಾಸವಿರುವ ಬಂದರಹಳ್ಳಿಗೆ ಸ್ಮಶಾನ,ರಸ್ತೆ.ವಿದ್ಯುತ್,ಚರಂಡಿ, ಕುಡಿಯುವ ನೀರು ಸೌಲಭ್ಯಗಳೇ ಇಲ್ಲ. ಈ ಬಗ್ಗೆ ಸಂಬಂಧ ಪಟ್ಟ ಎಲ್ಲಾ ಅಧಿಕಾರಿಗಳಿಗೆ ನೂರಾರು ಬಾರಿ ತಿಳಿಸಿದರೂ ಗ್ರಾಮ ಪಂಚಾಯಿತಿಗೆ ಅರ್ಜಿಕಳಿಸಿ ಸುಮ್ಮನಾಗುತ್ತಾರೆ. ಆದರೆ ಇಲ್ಲಿರುವ ಪಿಡಿಒ ಲೋಕೇಶ್‌ಗೆ ಮಾತ್ರ ಇದರ ಬಗ್ಗೆ ಗಮನ ಹರಿಸಲು ಸಮಯವೇ ಇಲ್ಲ. ಹೈಕೋರ್ಟ್ ಆದೇಶಕ್ಕೂ ಕಿಮ್ಮತ್ತು ನೀಡದ ಈತ ರಾಜಕೀಯ ಅಧಿಕಾರ ಬಳಸಿಕೊಂಡು ಸರ್ವಾಧಿಕಾರಿಯಂತೆ ವರ್ತಿಸುತ್ತಿದ್ದಾರೆ ಎಂದು ದೂರಿದರು.

ಗ್ರಾಮದ ನಿವೃತ್ತ ಅಧಿಕಾರಿ ನಾರಾಯಣಪ್ಪ ಹೈಕೋರ್ಟ್ ಮೊರೆ ಹೋಗಿದ್ದ ಕಾರಣ ನ್ಯಾಯಾಧೀಶರು, 2020ರಲ್ಲಿ 2ತಿಂಗಳ ಒಳಗೆ ಸಂಬಂಧ ಪಟ್ಟ ಗ್ರಾಮಕ್ಕೆ ಜಿಲ್ಲಾಮಟ್ಟದ ಅಧಿಕಾರಿಗಳು ಭೇಟಿ ನೀಡಿ ಸೌಲಭ್ಯಗಳನ್ನು ಒದಗಿಸಬೇಕೆಂದು ಅದೇಶ ಮಾಡಿದ್ದರು. ಆದರೆ ಈ ಆದೇಶ ಜಾರಿಗೊಳಿಸದೇ ಪಿಡಿಒ ಉಲ್ಲಂಘನೆ ಮಾಡಿದ್ದಾರೆಂದು ಆರೋಪಿಸಿದರು.

ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಕೂಡಲೆ ಗ್ರಾಮಕ್ಕೆ ಸೌಕರ್ಯ ಕಲ್ಪಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಎಸ್ಎಸ್‌ಡಿಯ ಈಶ್ವರಪ್ಪ, ವಿ.ಎನ್.ನಾರಾಯಣಪ್ಪ,ಅಶ್ವತ್ಥಪ್ಪ,ಈಧರೆ ಪ್ರಕಾಶ್, ಆಂಜಿನಪ್ಪ, ಗೌರೀಶ್, ಮುನಿರಾಜು, ಲಕ್ಷ್ಮಮ್ಮ, ಗ್ರಾಮಸ್ಥರು ಇದ್ದರು.

ಗೌಡಗೆರೆ ಪಿಡಿಒ ವಿರುದ್ಧ ಎಸ್‌ಎಸ್‌ಡಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಅನಗತ್ಯ ವಿಚಾರ ತುಂಬುವ ಪತ್ಯ

ತುಮಕೂರು: ನವಭಾರತ ನಿರ್ಮಾಣಕ್ಕೆ ಯುವಜನತೆ ಮುಂದಾಗಬೇಕು. ಭಾರತವನ್ನು ಸುಭದ್ರವನ್ನಾಗಿ ಮಾಡುವ ಜವಾಬ್ದಾರಿ ಎಲ್ಲರದು ಎಂದು ಪಾವಗಡದ ಶ್ರೀ ರಾಮಕೃಷ್ಣ ಸೇವಾಶ್ರಮದ ಅಧ್ಯಕ್ಷರಾದ ಜಪಾನಂದ ಸ್ವಾಮೀಜಿ ಕರೆ ನೀಡಿದರು.

ವಿಶ್ವವಿದ್ಯಾನಿಲಯ ಕಲಾ ಕಾಲೇಜಿನಲ್ಲಿ ಸ್ವಾಮಿ ವಿವೇಕಾನಂದ ಅಧ್ಯಯನ ಪೀಠದ ವತಿಯಿಂದ ಗುರುವಾರ ಆಯೋಜಿಸಿದ್ದ ಸ್ವಾಮಿ ವಿವೇಕಾನಂದರ 162ನೇ ಜನ್ಮ ಮಹೋತ್ಸವದ ಹಾಗೂ ರಾಷ್ಟ್ರೀಯ ಯುವದಿನಾಚರಣೆ ನೆರವೇರಿಸಿ ಮಾತನಾಡಿದರು.

ನನ್ನ ದೇಶಕ್ಕೆ ನಾನು ಏನು ಮಾಡಬಲ್ಲೆ? ನನ್ನ ಸಂಸ್ಕೃತಿಗೆ ನನ್ನ ಕೊಡುಗೆ ಏನು? ಎಂದು ನೀವೇ ಪ್ರಶಿಸಿಕೊಳ್ಳಿ. ಮಂಗಳಕ್ಕೆ ಹೋದ ನಾವು ಮನದ ಅಂಗಳಕ್ಕೆ ಹೋಗುವುದಕ್ಕೆ ವಿಫಲ ಆಗುತ್ತಿದ್ದೇವೆ. ಶಾಲೆಯ ಶಿಕ್ಷಣದಲ್ಲಿ ಅಗತ್ಯ ವಿಚಾರಗಳಿಗಿಂತ ಅನಗತ್ಯ ವಿಚಾರಗಳನ್ನು ತುಂಬುತ್ತಿದ್ದಾರೆ. ಸ್ವಾಮಿ ವಿವೇಕಾನಂದರ ವಿಚಾರಧಾರೆ ಅರಿತು ಯುವಜನತೆ ಶಕ್ತಿಯ ಜ್ವಾಲೆಗಳಾಗಬೇಕು ಎಂದರು.

ಶಿಕ್ಷಣ ತಜ್ಞರಾದ ಕೆ. ಆರ್. ಪದ್ಮಿನಿ ಮಾತನಾಡಿ, ಶಕ್ತಿಯು ನಮ್ಮೊಳಗೆ ಇದೆ. ನಾವು ಏನು ಬೇಕಾದರೂ ಸಾಧಿಸಬಹುದು. ಶಕ್ತಿಯ ಗಣಿಗಳಾಗಿ ಒಳ್ಳೆಯ ವಿಚಾರಗಳಿಗೆ ಕಿವಿ ಕೊಡಿ ಆತ್ಮವಿಶ್ವಾಸದಿಂದ ಏನನ್ನು ಬೇಕಾದರೂ ಸಾಧಿಸಬಹುದು ಎಂದು ಹೇಳಿದರು. ನಿತ್ಯಾನಂದ ವಿವೇಕವಂಶಿ ಮಾತನಾಡಿ, ದೇಶ ಬದಲಿಸಬೇಕೆಂದರೆ ಮೊದಲು ಮನುಷ್ಯರನ್ನು ಬದಲಾಯಿಸಬೇಕು.ವಿವೇಕಾನಂದರನ್ನು ಎಲ್ಲಾ ದೇಶಗಳು ಒಪ್ಪಿಕೊಳ್ಳುತ್ತವೆ ಎಂದರು.

ತುವಿವಿ ಕುಲಪತಿ ಪ್ರೊ. ಎಂ. ವೆಂಕಟೇಶ್ವರಲು, ವಿವೇಕಾನಂದರು ತಮ್ಮ ಸ್ವಾರ್ಥದ ಬಗ್ಗೆ ಚಿಂತಿಸಿರಲಿಲ್ಲ. ಸದಾ ದೇಶದ ಶಕ್ತಿಯನ್ನು ಪ್ರೇರೇಪಿಸಿದರು. ಯುವಜನತೆ ಅಂತರಂಗದ ಶಕ್ತಿ ಹೆಚ್ಚಿಸಿಕೊಂಡು ದೇಶ ಕಟ್ಟುವ ಕಾರ್ಯದಲ್ಲಿ ತೊಡಗಬೇಕು ಎಂದರು. ಕುಲಸಚಿವೆ ನಾಹಿದಾ ಜ಼ಮ್ ಜ಼ಮ್, ಪರೀಕ್ಷಾಂಗ ಕುಲಸಚಿವ ಪ್ರೊ. ಪ್ರಸನ್ನ ಕುಮಾರ್ ಕೆ., ಕಲಾ ಕಾಲೇಜಿನ ಪ್ರಾಂಶುಪಾಲ ಪ್ರೊ. ಬಿ ಕರಿಯಣ್ಣ., ವಿವೇಕಾನಂದ ಅಧ್ಯಯನ ಪೀಠ ಸಂಯೋಜಕರಾದ ಡಾ. ಚೇತನ್ ಪ್ರತಾಪ್ ಕೆ.ಎನ್. ಉಪಸ್ಥಿತರಿದ್ದರು.

ತುಮಕೂರು ವಿವಿ ಕಲಾ ಕಾಲೇಜಿನಲ್ಲಿ ನಡೆದ ರಾಷ್ಟ್ರೀಯ ಯುವ ದಿನಾಚರಣೆಯಲ್ಲಿ ಜಪಾನಂದ ಸ್ವಾಮೀಜಿ ಮಾತನಾಡಿದರು.

ಸಮಾಚಾರ ಸಣ್ಣದಲ್ಲ

ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

ರಾಮನಗರ: ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹೊರಡಿಸಿದ ಅಧಿಸೂಚನೆಯಂತೆ ರಾಮನಗರ ಜಿಲ್ಲೆಗೆ ಸಂಬಂಧಿಸಿದಂತೆ ಗ್ರೂಪ್ ಸಿ ಹುದ್ದೆಯ 51 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ. ತಾತ್ಕಾಲಿಕ ಆಯ್ಕೆಪಟ್ಟಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಜ.23ರೊಳಗೆ ಸಂಬಂಧಿಸಿದ ದಾಖಲಾತಿಗಳೊಂದಿಗೆ ಅಪರ ಜಿಲ್ಲಾಧಿಕಾರಿಗಳು, ಜಿಲ್ಲಾ ಕಚೇರಿ ಸಂಕೀರ್ಣ, ರಾಮನಗರ-562159 ಇವರಿಗೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಇಂದು ದಿಶಾ ಸಭೆ

ರಾಮನಗರ: ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಮಟ್ಟದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯನ್ನು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ ಅವರ ಅಧ್ಯಕ್ಷತೆಯಲ್ಲಿ ಜ. 17ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನಗರದ ಜಿಪಂ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಸಿಇಒ ತಿಳಿಸಿದ್ದಾರೆ.

ರಾಜ್ಯಮಟ್ಟದ ಯುವ ಪ್ರಶಸ್ತಿಗೆ ಆಯ್ಕೆ

ಮಡಿಕೇರಿ: ರಾಜ್ಯ ಯುವ ಸಂಘಗಳ ಒಕ್ಕೂಟದ ವತಿಯಿಂದ ನೀಡಲಾಗುವ 2024-25ನೇ ಸಾಲಿನ

ರಾಜ್ಯಮಟ್ಟದ ಯುವ ಪ್ರಶಸ್ತಿಗೆ ವಿರಾಜಪೇಟೆ ನಾಟ್ಯಾಂಜಲಿ ನೃತ್ಯ ಸಂಸ್ಥೆಯ ಭರತನಾಟ್ಯ ಹಾಗೂ ಪಾಶ್ಚಾತ್ಯ ನೃತ್ಯ ತರಬೇತುದಾರರಾದ ವಿದುಷಿ ಕಾವ್ಯಶ್ರೀ ಆಯ್ಕೆಯಾಗಿದ್ದಾರೆ. ವಿರಾಜಪೇಟೆಯ ಬಿಳುಗುಂದ ಗ್ರಾಮದ ಎಂ.ಪಿ.ಕಾಂತರಾಜ್ ಹಾಗೂ ಎಂ.ಎಸ್.ಹೇಮಾವತಿ ದಂಪತಿಯ ಪುತ್ರಿ. ಗೋಣಿಕೊಪ್ಪಲು ಕಾವೇರಿ ಪದವಿ ಕಾಲೇಜಿನಲ್ಲಿ ಪದವಿ ಮುಗಿಸಿ ಪ್ರಸ್ತುತ ಮೈಸೂರಿನ ಮುಕ್ತ ವಿವಿಯಲ್ಲಿ ಗಣಿತ ಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿ ಓದುತ್ತಿದ್ದು, ಅರಮೇರಿಯ ಎಸ್.ಎಂ.ಎಸ್ ಶಾಲೆಯಲ್ಲಿ ಶಿಕ್ಷಕಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಗೆಜೆಟಿಯರ್
ಪ್ರತಿ ಮಂಗಳವಾರ
ಇದು ಅನುಕ್ಷಣದ ಆ್ಯಪ್

ಮೈಸೂರು ವಿವಿ 105ನೇ ಘಟಿಕೋತ್ಸವ ಜ.18ಕ್ಕೆ

ಮೈಸೂರು ವಿಶ್ವವಿದ್ಯಾನಿಲಯ 31689 ವಿದ್ಯಾರ್ಥಿಗಳಿಗೆ ವಿವಿಧ ಪದವಿ ಪ್ರದಾನ

ಮೈಸೂರು: ಜ.18ರಂದು ಮೈಸೂರು ವಿಶ್ವವಿದ್ಯಾನಿಲಯದ 105ನೇ ಘಟಿಕೋತ್ಸವ ವಿವಿಯ ಕ್ರಾಫರ್ಡ್ ಭವನದಲ್ಲಿ ನಡೆಯಲಿದ್ದು, ಮೂವರಿಗೆ ಗೌರವ ಡಾಕ್ಟರೇಟ್, 31689 ವಿದ್ಯಾರ್ಥಿಗಳಿಗೆ ವಿವಿಧ ಪದವಿ ಪ್ರದಾನ ಮಾಡಲಾಗುವುದು ಎಂದು ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಧ್ಯಕ್ಷತೆ ವಹಿಸುವರು. ನವದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಪ್ರಾಧ್ಯಾಪಕ ಡಾ.ಟಿ.ಪಿ.ಸಿಂಗ್ ಘಟಿಕೋತ್ಸವ ಭಾಷಣ ಮಾಡುವರು. ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಉಪಸ್ಥಿತರಿರುವರು ಎಂದು ತಿಳಿಸಿದರು.

> **ಮೈಸೂರು ವಿಶ್ವವಿದ್ಯಾನಿಲಯದಲ್ಲಿ 400ಕ್ಕೂ ಹೆಚ್ಚು ಬೋಧಕ ಹುದ್ದೆಗಳು ಖಾಲಿ ಇದ್ದು, ಶೇ.76ರಷ್ಟು ಬೋಧಕರ ಕೊರತೆ ಇದೆ. ಬ್ಯಾಕ್‌ಲಾಗ್ ಹುದ್ದೆಗಳನ್ನಾದರೂ ಭರ್ತಿ ಮಾಡಿ ಎಂದು ಮನವಿ ಮಾಡಲಾಗುತ್ತಿದೆ. ಆದರೆ, ಅನುಮತಿ ಸಿಕ್ಕಿಲ್ಲ. ಸದ್ಯಕ್ಕೆ ವಿವಿ ತಾತ್ಕಾಲಿಕ ಬೋಧಕರಿಂದ ಉತ್ತಮವಾಗಿ ನಡೆಯುತ್ತಿದೆ.**
> - ಪ್ರೊ.ಎನ್.ಕೆ.ಲೋಕನಾಥ್, ಕುಲಪತಿ

ಪದಕ, ಪದವಿ: ಒಟ್ಟು 31689 ಅಭ್ಯರ್ಥಿಗಳಿಗೆ ಪದವಿ ಪ್ರದಾನ ಮಾಡಲಾಗುತ್ತಿದೆ. ಹುಡುಗಿಯರು 20022 ಮತ್ತು 11667 ಹುಡುಗರು ಇದ್ದಾರೆ. 304 ವಿದ್ಯಾರ್ಥಿಗಳಿಗೆ ಪಿಎಚ್.ಡಿ, 413 ಪದಕ ಮತ್ತು 208 ಬಹುಮಾನಗಳನ್ನು 216 ವಿದ್ಯಾರ್ಥಿಗಳು ಪಡೆಯಲಿದ್ದಾರೆ. ಕಲಾ ನಿಕಾಯ 4306, ವಾಣಿಜ್ಯ 13737, ಶಿಕ್ಷಣ 2790, ಕಾನೂನು 68, ಐಟಿಬಿಟಿ 8877 ಅಭ್ಯರ್ಥಿಗಳು ಪದವಿ ಪಡೆದುಕೊಳ್ಳುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕುಲಸಚಿವ ಬಸವರಾಜು ಇದ್ದರು.

ಸುದ್ದಿಗೋಷ್ಠಿಯಲ್ಲಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಮಾತನಾಡಿದರು.

ಚಿನ್ನದ ಹುಡುಗಿ ಭೂಮಿಕ

ಎಂಎಸ್ಸಿ ರಸಾಯನಶಾಸ್ತ್ರ ವಿಭಾಗದಲ್ಲಿ ಭೂಮಿಕ ಎಂ.ಆರ್ 18 ಚಿನ್ನದ ಪದಕ, 4 ನಗದು ಬಹುಮಾನ ಪಡೆದುಕೊಂಡು ವಿವಿಗೆ ಚಿನ್ನದ ಹುಡುಗಿಯಾಗಿ ಹೊರಹೊಮ್ಮಿದ್ದಾಳೆ. ಎಂಎ ಕನ್ನಡದಲ್ಲಿ ಕಾವ್ಯ.ಸಿ 11 ಚಿನ್ನದ ಪದಕ, 5 ನಗದು ಬಹುಮಾನ, ಬಿಎ ನಲ್ಲಿ ಸಂಗೀತ.ಪಿ.ಕೆ 5 ಚಿನ್ನದ ಪದಕ, 7 ನಗದು ಬಹುಮಾನ, ಬಿಎಸ್ಸಿಯಲ್ಲಿ ವಿನಯ್.ಬಿ.ವಿ 6 ಚಿನ್ನದ ಪದಕ, 5 ನಗದು ಬಹುಮಾನ, ದೀಪಿಕಾ ಗೌಡ ಎಂ.ಎಸ್ 4 ಚಿನ್ನದ ಪದಕ, 7 ನಗದು ಬಹುಮಾನ, ಎಲ್‌ಎಲ್‌ಎಂ ನಲ್ಲಿ ದೇವೇಂದ್ರ.ಆರ್ 3 ಚಿನ್ನದ ಪದಕ, 3 ನಗದು ಬಹುಮಾನ ಪಡೆದುಕೊಂಡಿದ್ದಾರೆ.

ಮೂವರಿಗೆ ಗೌರವ ಡಾಕ್ಟರೇಟ್

ಈ ಬಾರಿಯ ಘಟಿಕೋತ್ಸವದಲ್ಲಿ ಮಾಜಿ ಸಂಸದ ಡಾ.ಎ.ಸಿ.ಷಣ್ಮುಗಂ, ಮುಖ್ಯ ಸಾರಿಗೆ ಎಂಜಿನಿಯರ್ ಡಾ.ಬಾಬು.ಕೆ.ವೀರೇಗೌಡ, ಗ್ಲೋಬಲ್ ಸಿಇಒ, ವ್ಯವಸ್ಥಾಪಕ ನಿರ್ದೇಶಕ ಶಾಹೀನ್ ಮಜೀದ್ ಅವರಿಗೆ ಗೌರವ ಡಾಕ್ಟರೇಟ್ ನೀಡಲಾಗುತ್ತಿದೆ. ಇನ್ಫೋಸಿಸ್ ಪ್ರತಿಷ್ಠಾನದ ಸಂಸ್ಥಾಪಕಿ ಡಾ.ಸುಧಾ ಮೂರ್ತಿ ಅವರಿಗೆ 2020ರಲ್ಲಿ ಡಾಕ್ಟರೇಟ್ ನೀಡಲಾಗಿತ್ತು. ಕೋವಿಡ್ ಕಾರಣ ಗೈರಾಗಿದ್ದರು.

ಚೂಡಾದಿಂದ 236 ನಿವೇಶನ ಹಂಚಿಕೆಗೆ ಅರ್ಜಿ ಆಹ್ವಾನ

ನಗರದ ಚೂಡಾ ಕಚೇರಿ ಪತ್ರಿಕಾಗೋಷ್ಠಿಯಲ್ಲಿ ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮಾತನಾಡಿದರು.

ಚಾಮರಾಜನಗರ : ಚಾಮರಾಜನಗರ-ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರ (ಚೂಡಾ) ನಗರಕ್ಕೆ ಸಮೀಪದ ಚಾಮರಾಜನಗರ ಹಾಗೂ ಮಸಗಾಪುರದ ಬಳಿ 14.24 ಎಕರೆ ಭೂಮಿಯಲ್ಲಿ ವಸತಿ ಬಡಾವಣೆಗೆ ವಿವಿಧ ಅಳತೆಯ 236 ನಿವೇಶನಗಳ ಹಂಚಿಕೆ ಮಾಡಲು ಸಾರ್ವಜನಿಕರಿಂದ ಅರ್ಜಿ ಆಹ್ವಾನಿಸಿದೆ ಎಂದು ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ತಿಳಿಸಿದರು.

ನಗರದ ಚೂಡಾ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಚೂಡಾ ಅಧ್ಯಕ್ಷರು ಪ್ರಾಧಿಕಾರದ ಶೇ.50ರಷ್ಟು ಪಾಲಿನ ವಿವಿಧ ಅಳತೆಯ ನಿವೇಶನಗಳನ್ನು ಕಡಿಮೆ ದರದಲ್ಲಿ ನೀಡಲಿದ್ದು, ಜ.16ರಿಂದ ಅರ್ಜಿ ಸಲ್ಲಿಸಬಹುದು ಎಂದರು.

6.ಮೀ, 8.3 ಮೀ ಅಳತೆಯ ನಿವೇಶನಕ್ಕೆ 6,69,810 ರೂ. ಮೌಲ್ಯ ನಿಗದಿ ಮಾಡಿದ್ದು ಶೇ. 10ರಷ್ಟು ಅಂದರೆ 66,980 ರೂ. ಗಳ ಪ್ರಾರಂಭಿಕ ಠೇವಣಿ, ನೋಂದಣಿ ಶುಲ್ಕವಾಗಿ 100 ರೂ. ಗಳನ್ನು ಪಾವತಿಸಬೇಕಿದೆ. 9. ಮೀ, 15. ಮೀ ಅಳತೆ ನಿವೇಶನಕ್ಕೆ 18,15,750 ರೂ. ಮೌಲ್ಯ ನಿಗದಿ ಮಾಡಿದ್ದು ಶೇ. 10ರಷ್ಟು ಅಂದರೆ 1,81,575 ರೂ. ಗಳ ಪ್ರಾರಂಭಿಕ ಠೇವಣಿ, ನೋಂದಣಿ ಶುಲ್ಕವಾಗಿ 250 ರು. ಪಾವತಿಸಬೇಕಿದೆ. 12.0 ಮೀ, 18.ಮೀ ಅಳತೆಯ ನಿವೇಶನಕ್ಕೆ 29,05,200 ರೂ. ಮೌಲ್ಯ ನಿಗದಿ ಮಾಡಿದ್ದು ಶೇ. 10ರಷ್ಟು ಅಂದರೆ 2,90,520 ರೂ. ಗಳ ಪ್ರಾರಂಭಿಕ ಠೇವಣಿ, ನೋಂದಣಿ ಶುಲ್ಕವಾಗಿ 500 ರೂ. ಗಳನ್ನು ಪಾವತಿಸಬೇಕಿದೆ. ಅರ್ಜಿ ಶುಲ್ಕ 500 ರೂ.ಗಳಾಗಿದೆ ಎಂದು ಅವರು ತಿಳಿಸಿದರು.

ಪ್ರಾಧಿಕಾರದಿಂದ ನಿವೇಶನಗಳಿಗೆ ನಿಗದಿಪಡಿಸಿರುವ ದರ ಪ್ರತೀ ಚ.ಮೀ ಗೆ 13,450 ರೂ. ಗಳಾಗಿವೆ (ಚ. ಅಡಿಗೆ 1250 ರೂ.) ಆಗಿದ್ದು, ನಿವೇಶನಾಕಾಂಕ್ಷಿಗಳು ಚಾಮರಾಜನಗರದ ಇಂಡಿಯನ್ ಬ್ಯಾಂಕಿನಲ್ಲಿ ಅರ್ಜಿ ಪಡೆದು ಶುಲವನ್ನು ಫೆಬ್ರವರಿ 28ರೊಳಗೆ ಪಾವತಿಸಬೇಕಾಗುತ್ತದೆ. ಒಟ್ಟು 236 ನಿವೇಶನಗಳನ್ನು ಹಂಚಿಕೆ ಮಾಡಲಾಗುತ್ತಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಪುಟ್ಟಸ್ವಾಮಿ, ಎಸ್. ರಾಜು, ರಾಜೇಂದ್ರ, ಅಂಬಿಕಾ, ಆಯುಕ್ತ ಹೆಚ್.ವಿ. ಸೀಮಾ, ಸಹಾಯಕ ನಿರ್ದೇಶಕ ರಿತೇಶ್, ಎಂಜಿನಿಯರ್ ಐಶ್ವರ್ಯ ಇದ್ದರು.

ಕ್ರೀಡಾ ವಸತಿ ನಿಲಯಕ್ಕೆ ಆಯ್ಕೆ ಪ್ರಕ್ರಿಯೆಗೆ ಆಹ್ವಾನ

ರಾಮನಗರ: ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2025-26ನೇ ಸಾಲಿನ 5ನೇ ತರಗತಿ, 8ನೇ ತರಗತಿ ಮತ್ತು ಪ್ರಥಮ ಪಿ.ಯು.ಸಿ ಕ್ರೀಡಾಪಟುಗಳಿಗೆ ರಾಮನಗರ ಜಿಲ್ಲಾ ಕ್ರೀಡಾ ವಸತಿ ನಿಲಯಕ್ಕೆ ಆಯ್ಕೆ ಪ್ರಕ್ರಿಯೆಗೆ ಪ್ರತಿಭಾನ್ವಿತ ಕ್ರೀಡಾಪಟು ಗಳನ್ನು ಆಹ್ವಾನಿಸಲಾಗಿದೆ. ಆಯ್ಕೆ ಪ್ರಕ್ರಿಯೆಯಲ್ಲಿ ಅಥ್ಲೆಟಿಕ್ಸ್, ಬ್ಯಾಸ್ಕೆಟ್ ಬಾಲ್, ವಾಲಿಬಾಲ್, ಫುಟ್‌ಬಾಲ್, ಹಾಕಿ, ಜಿಮ್ನಾಸ್ಟಿಕ್, ಜೂಡೋ, ಕುಸ್ತಿ, ಆರ್ಚರಿ, ಫೆನ್ಸಿನ್, ಸೈಕ್ಲಿಂಗ್ ಮಾಡಲಾ ಗುವುದು. ಪ್ರವೇಶ ಪ್ರಕ್ರಿಯೆಲ್ಲಿ ಆಯ್ಕೆ ಯಾದ ಕ್ರೀಡಾಪಟುಗಳಿಗೆ ಇಲಾಖೆಯು ಉಚಿತವಾಗಿ ಊಟ, ವಸತಿಯೊಂದಿಗೆ ತರಬೇತಿಯನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂ ಗಣ, ರಾಮನಗರ, ಮೊ : 8494830078 ಸಂಪರ್ಕಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ರಾಮನಗರ: ನಾಳೆ ಕುಂದು ಕೊರತೆ ಸಭೆ

ರಾಮನಗರ: ಬೆಸ್ಕಾಂ ವತಿಯಿಂದ ಜ.18ರ ಶನಿವಾರ ಮಧ್ಯಾಹ್ನ 3 ಗಂಟೆಗೆ ಗ್ರಾಹಕರ ಕುಂದು ಕೊರತೆ ಸಭೆಯನ್ನು ಸಾತನೂರು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)ಕಚೇರಿ, ಹಾರೋಹಳ್ಳಿ ವಿಭಾಗದ ಬಿಡದಿ ರಸ್ತೆಯ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)ಕಚೇರಿ, ಕನಕಪುರ ಸಂಗಮ ರಸ್ತೆಯ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಕಚೇರಿ ಹಾಗೂ ಕನಕಪುರ ಕೋಡಿಹಳ್ಳಿಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಗ್ರಾಹಕರು ಸಂಬಂಧಪಟ್ಟ ಕಚೇರಿಗೆ ಆಗಮಿಸಿ ಸಮಸ್ಯೆ ಪರಿಹರಿಸಿಕೊಳ್ಳುವಂತೆ ಬೆಸ್ಕಾಂನ ಕನಕಪುರ ವಿಭಾಗದ ಎಇಇ ತಿಳಿಸಿದ್ದಾರೆ.

ಪಿರಿಯಾಪಟ್ಟಣ : ಬೆಟ್ಟದಪುರ ಯೋಜನೆ ಕಚೇರಿಯ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ವತಿಯಿಂದ ಭೋಗನಹಳ್ಳಿಯ ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಕಿತ್ತೂರು ವಲಯದ ಮೇಲ್ವಿಚಾರಕರಾದ ದಾಮೋದರ್, ಸೇವಾ ಪ್ರತಿನಿಧಿಗಳಾದ ಅರ್ಚನ ಮೂರ್ತಿ, ಮಾಜಿ ಗ್ರಾಮ ಪಂಚಾಯತಿ ಸದಸ್ಯೆ ಆಶಾ ರಾಣಿ ಹಾಗೂ ಗ್ರಾಮದ ಸಂಘದ ಸದಸ್ಯರು ಇದ್ದರು.

ಸರಗೂರು ತಾ.ಕನ್ನಡ ಸಾಹಿತ್ಯ ಜಾತ್ರೆ ಇಂದು

ಸರಗೂರು: ವನಜಲಸಿರಿ ನಾಡಿನಲ್ಲಿ ಜ.17ರಂದು ಇದೇ ಮೊದಲ ಬಾರಿಗೆ ನಡೆಯುತ್ತಿರುವ ತಾಲೂಕು ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸರಗೂರು ಸಜ್ಜಾಗಿದೆ. ಕನ್ನಡ ಸಾಹಿತ್ಯ ಪರಿಷತ್ ಸಕಲ ಸಿದ್ಧತೆ ಮಾಡಿಕೊಂಡಿದೆ.

ಪಟ್ಟಣದ ಜಯಚಾಮರಾಜೇಂದ್ರ ಕ್ರೀಡಾಂಗಣದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ವೇದಿಕೆ ಸಿದ್ದಗೊಂಡಿದ್ದು, ಪಟ್ಟಣದಲ್ಲಿ ಕನ್ನಡದ ಬಾವುಟಗಳು ರಾರಾಜಿಸುತ್ತಿವೆ. ಬೆಳಗ್ಗೆ 8.30ಕ್ಕೆ ಪೂರ್ಣಕುಂಭ ಹಾಗೂ ವಿವಿಧ ಜಾನಪದ ಕಲಾತಂಡಗಳೊಂದಿಗೆ ಸಮ್ಮೇಳನಾಧ್ಯಕ್ಷರ ಮೆರವಣಿಗೆ ಇರಲಿದೆ. ನಂತರ ಬೆಳಗ್ಗೆ 10.30ಕ್ಕೆ ವೇದಿಕೆ ಕಾರ್ಯಕ್ರಮ ಇರಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ.ಮಹದೇವಪ್ಪ ಉದ್ಘಾಟಿಸಲಿದ್ದಾರೆ. ರೇಷ್ಮೆ ಸಚಿವ ಕೆ.ವೆಂಕಟೇಶ್ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸದ್ದಾರೆ.

ಶಾಸಕ ಅನಿಲ್ ಚಿಕ್ಕಮಾದು ಅಧ್ಯಕ್ಷತೆ ವಹಿಸಲಿದ್ದು, ಸಂಸದರಾದ ಸುನೀಲ್ ಬೋಸ್, ಯದವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ಕಸಾಪ ರಾಜ್ಯಾಧ್ಯಕ್ಷ ಡಾ,ನಾಡೋಜ ಮಹೇಶ್ ಜೋಷಿ ಸ್ಮರಣ ಸಂಚಿಕೆ ಬಿಡುಗಡೆಗೊಳಿಸುವರು. ಶಾಸಕ ದರ್ಶನ್ ಧ್ರುವನಾರಾಯಣ್ ಪುಸ್ತಕ ಮಳಿಗೆ ಉದ್ಘಾಟನೆ ಮಾಡುವರು. ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಕೃತಿ ಬಿಡುಗಡೆಗೊಳಿಸುವರು. ಸಾಹಿತಿ ಡಾ.ವೈ.ಡಿ.ರಾಜಣ್ಣ ಸಮ್ಮೇಳನಾಧ್ಯಕ್ಷರ ನುಡಿ ನುಡಿಯುವರು. ಕಸಾಪ ಅಧ್ಯಕ್ಷ ಎಂ.ಕೆಂಡಗಣ್ಣಸ್ವಾಮಿ ಸ್ವಾಗತ ಮಾಡುವರು.

ವಿಚಾರ ಗೋಷ್ಠಿ:

ಮೊದಲನೇ ಗೋಷ್ಠಿ ಮಧ್ಯಾಹ್ನ 2ಕ್ಕೆ ನಡೆಯಲಿದ್ದು, ಹಿರಿಯ ಚಲನಚಿತ್ರ ನಟಿ ಗಿರಿಜಾ ಲೋಕೇಶ್ ಉದ್ಘಾಟಿಸುವರು. ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಅಧ್ಯಕ್ಷತೆ ವಹಿಸುವರು. ಸಿನಿಮಾ ನಿರ್ದೇಶಕ ಕಾರ್ತಿಕ್, ಕೃತಿಕಾಗಣೇಶ್ ಸರಗೂರು ತಾಲುಕು ದರ್ಶನ ಕುರಿತು ಮಾತನಾಡುವರು. ಮಧ್ಯಾಹ್ನ 3ಕ್ಕೆ ಎರಡನೇ ಗೋಷ್ಠಿ ನಡೆಯಲಿದ್ದು, ಮೈಸೂರಿನ ಪ್ರಾಧ್ಯಾಪಕ ಡಾ.ಎಚ್.ಬಿ.ಬೆಟ್ಟಸ್ವಾಮಿ ಕನ್ನಡ ಶಾಲೆಗಳು-ಇತ್ತೀಚಿನ ಬೆಳವಣಿಗೆ ಕುರಿತು ಮಾತನಾಡುವರು.

ಸಂಜೆ 5ಕ್ಕೆ ಸಾಧಕರಿಗೆ ಸನ್ಮಾನ ಕಾರ್ಯಕ್ರಮಕ್ಕೆ ಶಾಸಕ ಅಡಗೂರು ಎಚ್. ವಿಶ್ವನಾಥ್ ವಿಶೇಷ ಅತಿಥಿಗಳಾಗಿ ಆಗಮಿಸುವರು.

ಸಮಾರೋಪ: ಸಂಜೆ 6ಕ್ಕೆ ನಡೆಯುವ ಸಮಾರೋಪ ಸಮಾರಂಭದದಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷೆ ಡಾ.ಮಾನಸ ಭಾಷಣ ಮಾಡುವರು.ಸಂಜೆ 7ಕ್ಕೆ ಸಾಂಸ್ಕೃತಿಕ ವೈಭವ ಕಾರ್ಯಕ್ರಮ ಇರಲಿದ್ದು, ಕಾಮಿಡಿ ಕಿಲಾಡಿ ಕಲಾವಿದರಾದ ಗಿಲ್ಲಿನಟ, ಗಗನ ಅವರಿಂದ ನಗೆ ಹಬ್ಬ ಇರಲಿದೆ. ಜೂನಿಯರ್ ವಿಷ್ಣುವರ್ಧನ್, ಅಂಬರೀಶ್, ರವಿಚಂದ್ರನ್ ಮನರಂಜನಾ ಕಾರ್ಯಕ್ರಮ ಇರಲಿದೆ.

ಸರಗೂರು ಜಯಚಾಮರಾಜೇಂದ್ರ ಒಡೆಯರ್ ಕ್ರೀಡಾಂಗಣ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಿದ್ಧಗೊಂಡಿರುವುದು.

ಸರಕಾರಿ ಶಾಲೆಗಳಲ್ಲಿ ಓದಿದ ಅನೇಕರೂ ಉನ್ನತ ಹುದ್ದೆಗೆ

ಬೇಲೂರು ಸರಕಾರಿ ಪ್ರೌಢಶಾಲೆಯಲ್ಲಿ 'ನನ್ನ ಕನ್ನಡ ನನ್ನ ಹೆಮ್ಮೆ' ಕಾರ್ಯಕ್ರಮ ನಡೆಯಿತು.

ಮಂಡ್ಯ: ಸರಕಾರಿ ಶಾಲೆಗಳಲ್ಲಿ ಓದಿದವರೂ ಮಂದಿ ಉನ್ನತ ಹುದ್ದೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಇದಕ್ಕೆ ನಾನೂ ಸಹ ಹೊರತಲ್ಲ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದರು.

ಅಮೃತ ಅಲಯನ್ಸ್ ಸಂಸ್ಥೆ, ಅಖಿಲ ಕರ್ನಾಟಕ ಸಿರಿಗನ್ನಡ ಪ್ರತಿಷ್ಠಾನ, ನಿ. ಎಲ್ಲರೊಳಗೊಂದಾಗು ಮಂಕುತಿಮ್ಮ ಟ್ರಸ್ಟ್, ಶಿಕ್ಷಕ ಕೆ.ಮಾಯಿಗಯ್ಯ ಸೇವಾ ಸಮಿತಿಯಿಂದ ಬೇಲೂರು ಸರಕಾರಿ ಪ್ರೌಢಶಾಲೆಯಲ್ಲಿ ನಡೆದ 'ನನ್ನ ಕನ್ನಡ ನನ್ನ ಹೆಮ್ಮೆ' ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಿಗೆ ಪ್ರತಿಭಾ ಪುರಸ್ಕಾರ ವಿತರಣಾ ಸಮಾರಂಭದಲ್ಲಿ ಮಾತನಾಡಿದರು.

ಕನ್ನಡ ಮತ್ತು ಸರ್ಕಾರಿಗಳ ಉಳಿವಿಗಾಗಿ ಸಾಕಷ್ಟು ಮಂದಿ ಹೋರಾಟ ಮಾಡುತ್ತಿದ್ದಾರೆ. ಸರಕಾರಿ ಶಾಲೆಗಳಲ್ಲಿಕಲಿತವರ ಆತ್ಮವಿಶ್ವಾಸವೇ ಬೇರೆಯದ್ದಾಗಿರುತ್ತದೆ. ಅದನ್ನು ಪ್ರತಿಯೊಬ್ಬರೂ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಖಾಸಗಿ ಶಾಲೆಗಳ ವ್ಯಾಮೋಹದಿಂದಾಗಿ ಎಲ್ಲರೂ ಐಷಾರಾಮಿ ಶಾಲೆಗಳಲ್ಲೇ ಕಲಿಯಲು ಆಸಕ್ತಿ ವಹಿಸುತ್ತಿದ್ದಾರೆ. ಇದು ಒಳ್ಳೆಯ ಬೆಳವಣಿಗೆಯಲ್ಲ. ನಾನೂ ಗ್ರಾಮೀಣ ಭಾಗದಿಂದಲೇ ಬಂದಿದ್ದೇನೆ. ಪದವಿ ಮತ್ತು ಸ್ನಾತಕೋತ್ತರ ಪದವಿ ಪಡೆದು ಚಿನ್ನದ ಪದಕದೊಂದಿಗೆ ಉತ್ತೀರ್ಣರಾಗಿದ್ದೇನೆ. ನಂತರ ಸ್ಪರ್ಧಾತ್ಮಕ ಪರೀಕ್ಷೆ ಬರೆದು ಪೊಲೀಸ್ ಇಲಾಖೆ ಉನ್ನತ ಹುದ್ದೆಯಲ್ಲಿದ್ದೇನೆ. ಈಗ ನನಗೆ ಹೆಮ್ಮೆ ಅನಿಸುತ್ತಿದೆ ಎಂದು ಹೇಳಿದರು.

ಮಂಕುತಿಮ್ಮ ಟ್ರಸ್ಟ್ ಅಧ್ಯಕ್ಷ ಎಂ.ವಿನಯ್ ಕುಮಾರ್ ಮಾತನಾಡಿ, ಮನುಷ್ಯ ಅಲ್ಪ ಮಾನವರಾಗದೆ ವಿಶ್ವ ಮಾನರಾಗಬೇಕು. ವಿಶ್ವಮಾನ ತತ್ವವನ್ನು ಅಳವಡಿಸಿಕೊಂಡು ಮುನ್ನಡೆಯಬೇಕು ಎಂದು ತಿಳಿಸಿದರು.

ಮುಖ್ಯಶಿಕ್ಷಕಿ ಪವಿತ್ರ ಅಧ್ಯಕ್ಷತೆ ವಹಿಸಿದ್ದರು. ರಾಜ್ಯ ವೈಜ್ಞಾನಿಕ ಪರಿಷತ್ ಅಧ್ಯಕ್ಷ ಎಂ.ಸಿ. ಬಸವರಾಜು ಉಪನ್ಯಾಸ ನೀಡಿದರು. ಅಮೃತ ಲಯನ್ಸ್ ಅಧ್ಯಕ್ಷ ಎಂ.ಲೋಕೇಶ್, ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣ, ಪ್ರದೀಪ್, ಚಂದ್ರಕಲಾ, ಉಷಾರಾಣಿ, ಗ್ರಾಮಾಂತರ ಪಿಎಸ್‌ಐ ಸಮಾರಂಭದಲ್ಲಿ ಭಾಗವಹಿಸಿದ್ದರು.

ಸಂಭ್ರಮ ಸಡಗರದ ಸಂಕ್ರಾಂತಿ ಹಬ್ಬ

ತಿ.ನರಸಿಪುರ : ತಾಲೂಕಿನಾದ್ಯಂತ ಸಂಕ್ರಾಂತಿ ಹಬ್ಬ ಸಂಭ್ರಮ ಸಡಗರದಿಂದ ಆಚರಣೆಯಾಗಿದ್ದು, ಪಟ್ಟಣದ ಖಾಸಗಿ ಬಸ್ ನಿಲ್ದಾಣ ವೃತ್ತದ ಬಳಿ ರೈತರು ಸುಗ್ಗಿ ಹಬ್ಬದ ನಿಮಿತ್ತ ರಾಸುಗಳನ್ನು ಕಿಚ್ಚಾಯಿಸಿದರು.

ನಗರದ ದೇವಾಲಯಗಳಲ್ಲೂ ವಿಶೇಷ ಪೂಜೆ ಹಾಗೂ ದೇವರ ದರ್ಶನ ನಡೆಯಿತು. ದೇವಾಲಯಗಳಲ್ಲಿ ದೇವರಿಗೆ ಅಲಂಕಾರ, ಅಭಿಷೇಕ ಪೂಜೆಗಳನ್ನು ಹಮ್ಮಿಕೊಳ್ಳಲಾಗಿತ್ತು. ಇತ್ತ ಮನೆಗಳಲ್ಲಿ ಗೋವಿಗೆ ಪೂಜೆ ಸಲ್ಲಿಸಿ, ಸಿಹಿ ಪೊಂಗಲ್ ನೀಡಲಾಯಿತು.

ಜಾನುವಾರುಗಳಿಗಿಂತಲೂ ಜನ ಜಾತ್ರೆಯೇ ಹೆಚ್ಚಾಗಿ ಸೇರಿತು. ರಾಸುಗಳ ಕಿಚ್ಚಾಯಿಸುವುದನ್ನು ವೀಕ್ಷಿಸಲು ಖಾಸಗಿ ಬಸ್ ನಿಲ್ದಾಣ ಹಾಗೂ ಲಿಂಕ್ ರಸ್ತೆಯ ಇಕ್ಕೆಲಗಳಲ್ಲಿ ಜನ ಸಂದಣಿ ತುಂಬಿತ್ತು. ಪಟ್ಟಣದ ಎರಡು ಸಮುದಾಯದ ಮುಖಂಡರು ಸಾಮರಸ್ಯದಿಂದ ಸೇರಿ, ರಸ್ತೆಯಲ್ಲಿ ಹಾಕಲಾಗಿದ್ದ ಹುಲಿನ ರಾಶಿಗೆ ಪೂಜೆಯನ್ನು ಸಲ್ಲಿಸಿ, ಕಿಚ್ಚು ಹಾಯಿಸುವ ಕಾರ್ಯಕ್ಕೆ ಚಾಲನೆ ನೀಡಿದರು.

ತಿ.ನರಸೀಪುರದಲ್ಲಿ ಮಕರ ಸಂಕ್ರಾಂತಿ ನಿಮಿತ್ತ ಜಾನುವಾರುಗಳಿಗೆ ಕಿಚ್ಚು ಹಾಯಿಸಿದರು.

...ಮತ್ತೆ ಸಾಹುಕಾರ್ ದರ್ಬಾರ್

← ಮೊದಲಪುಟದಿಂದ

ಈ ಹಿಂದೆ ಆಯೋಜಿಸಿದ್ದ ಡಿನ್ನರ್ ಸಭೆ ಮುಂದೂಡಲಾಗಿದ್ದರೂ, ಮತ್ತೊಮ್ಮೆ ಸಮಯ ಕೋರುವ ಇರಾದೆಯನ್ನು ಗೃಹ ಸಚಿವ ಡಾ.ಜಿ.ಪರಮೇಶ್ವರ್ ವ್ಯಕ್ತಪಡಿಸಿದ್ದಾರೆ. ಇವೆಲ್ಲದರ ಮದ್ಯೆ ಕೆಲ ಶಾಸಕರು ಡಿ.ಕೆ.ಶಿವಕುಮಾರ್ ಅವರನ್ನು ಬೆಂಬಲಿಸಿ ಮಾತನಾಡಿದರೆ, ಮತ್ತೆ ಹಲವರು ಸಿಎಂ ಹುದ್ದೆ / ಸಿಎಂ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಪಟ್ಟಕ್ಕೆ ಸಂಬಂಧಿಸಿದಂತೆ ಬೆಂಬಲಿಸುತ್ತಿದ್ದಾರೆ. ಮತ್ತೊಂದೆಡೆ ಬಿಜೆಪಿಯಲ್ಲಿರುವ ರಮೇಶ್ ಜಾರಕಿಹೊಳಿ ಕೂಡ ತಮ್ಮ ಸಹೋದರ ಸತೀಶ್ ರನ್ನು ಸಮರ್ಥಿಸಿಕೊಂಡು ಮೂರು ಪಕ್ಷದಲ್ಲಿ ತಮ್ಮ ಛಾಪು ಮೂಡಿಸಿ ಹೊಸ ರಾಜಕೀಯ ಲೆಕ್ಕಾಚಾರಕ್ಕೆ ಅಣಿಯಾಗಿದ್ದಾರೆ.

ಪ್ರಾದೇಶಿಕಕ್ಕೂ ರಮೇಶ್ ಆಸರೆ: ಇನ್ನು ಪ್ರಾದೇಶಿಕ ಪಕ್ಷವಾಗಿರುವ ಜೆಡಿಎಸ್ ಈಗಾಗಲೇ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿದ್ದು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಕೇಂದ್ರದ ಸಚಿವರಾಗಿದ್ದಾರೆ. ಸ್ಥಳೀಯವಾಗಿ ಜೆಡಿಎಸ್ ಕಳೆದ ಚುನಾವಣೆಯಲ್ಲಿ ಹೇಳಿಕೊಳ್ಳುವ ಸಾಧನೆ ಮಾಡದಿದ್ದರೂ, ಇಲ್ಲೂ ರಾಜ್ಯಾಧ್ಯಕ್ಷರ ಪಟ್ಟಕ್ಕೆ ಕಾದಾಟಗಳಿವೆ. ನಿಖಿಲ್ ಕುಮಾರಸ್ವಾಮಿಯನ್ನು ರಾಜ್ಯ ಘಟಕಕ್ಕೆ ನೇಮಕ ಮಾಡಲಾಗುತ್ತದೆ ಎಂಬ ಮಾತಿದ್ದರೂ ಪಕ್ಷದಲ್ಲಿ ಹಲವರ ವಿರೋಧವಿದೆ. ಇದೇ ವೇಳೆ ಪಕ್ಷವನ್ನು ಮೇಲಕ್ಕೆತ್ತಲು ಸಮರ್ಥ ಸಾರಥಿಯ ಅವಶ್ಯವಿದೆ. ಇದೇ ವೇಳೆ ರಾಜ್ಯ ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ವಿಪ್ಲವಗಳು ಎದುರಾದರೆ ತಮ್ಮ ಪಕ್ಷದ ಶಾಸಕರನ್ನು ಹಿಡಿತದಲ್ಲಿಟ್ಟಿಕೊಳ್ಳಬೇಕೆಂಬ ಇರಾದೆಯೂ ಪಕ್ಷದ ವರಿಷ್ಠರಲ್ಲಿದೆ.

ಇತ್ತ ಜೆಡಿಎಸ್‌ನ ಕೆಲ ಶಾಸಕರನ್ನು ಸಿಎಂ ಸಿದ್ದರಾಮಯ್ಯ, ಮತ್ತೊಂದೆಡೆ ಡಿ.ಕೆ.ಶಿವಕುಮಾರ್ ಅವರು ವೈಯುಕ್ತಿಕವಾಗಿ ಕರೆದು ಮಾತಾಡಿರುವುದು ಜೆಡಿಎಸ್ ವರಿಷ್ಠರ ಅಂಗಳಕ್ಕೆ ತಲುಪಿದೆ. ಹೀಗಾಗಿ ಪಕ್ಷದ ಶಾಸಕರನ್ನು ಉಳಿಸುವ ಕಾರ್ಯತಂತ್ರ ಭಾಗವಾಗಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಖುದ್ದಾಗಿ ರಮೇಶ್ ಜಾರಕಿಹೊಳಿ ಬಳಿ ಸಹಾಯ ಹಸ್ತ ಬಾಚಿರುವುದು ಈಗ ಗುಟ್ಟಾಗಿ ಉಳಿದಿಲ್ಲ. ಹೀಗಾಗಿ ರಾಜ್ಯ ರಾಜಕಾರಣ ಜಾರಕಿಹೊಳಿ ಸಹೋದರರ ಸುತ್ತ ಸುತ್ತುತ್ತಿದೆ.

ಐಸಿಎಆರ್ ಸಂಸ್ಥೆಯಿಂದ ರೈತರ ಅಭಿವೃದ್ಧಿ

ಧಾರವಾಡದ ಕೃಷಿ ವಿವಿ ಅಮೃತ ಮಹೋತ್ಸವದಲ್ಲಿ ಉಪರಾಷ್ಟ್ರಪತಿ ಜಗದೀಪ ಧನಕರ್ ಭಾಗಿ

ಧಾರವಾಡ: ಐಸಿಎಆರ್ ಬಹಳ ದೊಡ್ಡ ಸಂಸ್ಥೆ. ಇದನ್ನು ಬೆಳೆಸಲು ಹೆಚ್ಚುವರಿ ಅನುದಾನ ಬೇಕು. ಇದರಿಂದ ರೈತರ ಅಭಿವೃದ್ಧಿ ಆಗಲಿದೆ. ಭಾರತ ಜಗತ್ತಿನಲ್ಲೇ ಅತಿದೊಡ್ಡ ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರವಾಗಿದೆ. ಡಿಜಿಟಲ್ ಸೇರಿ ಹಲವು ವಿಚಾರದಲ್ಲಿ ನಾವು ಅಭಿವೃದ್ಧಿ ಆಗಿದ್ದೇವೆ ಎಂದು ಹೇಳಿದರು.

ಕೃಷಿ ವಿಶ್ವವಿದ್ಯಾಲಯದಲ್ಲಿ 75 ನೇ ವರ್ಷದ ಸುವರ್ಣ ಮಹೋತ್ಸವ ಹಾಗೂ ಹಳೇ ವಿದ್ಯಾರ್ಥಿಗಳ ಸಮ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೃಷಿ ವಿವಿಗೆ ಹಳೆಯ ವಿದ್ಯಾರ್ಥಿಗಳ ಕೊಡುಗೆ ಬಹುಮುಖ್ಯವಾಗಿದೆ. ಇದರಿಂದ ನಿಮ್ಮ ನಡುವೆ ಇರುವ ಸಂಬಂಧ ಸೇತುವೆ ಆಗಲಿದೆ. ಜೋಶಿ ಹಾಗೂ ಲಾಡ್ ಅವರೇ ಹಳೆಯ ವಿದ್ಯಾರ್ಥಿಗಳ ಸಮ್ಮಿಲನ ಕಾರ್ಯಕ್ರಮಕ್ಕೆ ನನ್ನನ್ನ ಕರೆದಿದ್ದು ಸಂತಸ ತಂದಿದೆ ಎಂದು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ಏ ದಿಲ್ ಮಾಂಗೇ ಮೋರ್..: ಪ್ರಧಾನಿ ಮೋದಿಯವರು ಏ ದಿಲ್ ಮಾಂಗೆ ಮೋರ್ ಎಂದು ಹೆಚ್ಚು ಅಭಿವೃದ್ಧಿ ಕಡೆ ಗಮನ ಹರಿಸಿದ್ದಾರೆ. ಹೆಚ್ಚಾಗಿ ರೈತರ ಕಡೆ ಗಮನ ಹರಿಸಿದ್ದಾರೆ. ನೆಹರೂ ಜೈ ಜವಾನ್ ಜೈಕಿಸಾನ್ ಎಂದರು. ಮೋದಿ ಅವರು ಮುರು ಬಾರಿ ಗೆದ್ದು ಕೃಷಿ ಅನುಸಂಧಾನ ಎಂದರು. ರೈತರು ಅಭಿವೃದ್ಧಿಯತ್ತ ಸಾಗುತ್ತಿರುವುದರಿಂದ ನಾನು ಬಹಳ ಸಂತೋಷದಲ್ಲಿ ಇದ್ದೇನೆ ಎಂದು ಜಗದೀಪ ಧನಕರ್ ಬಣ್ಣಿಸಿದರು.

ಶೌಚಾಲಯ,ಗ್ಯಾಸ್,ಇಂಟರ್ನೆಟ್ ಕೊಡುಗೆಯಲ್ಲಿ ಪ್ರಗತಿ: ನನ್ನಂತಹ ಕೃಷಿಕನ ಮಗ ವ್ಯಾಪಾರಿ ಕಡೆ ಹೋಗಿ ಅರಿಶಿನ ದರ ಏನಿದೆ ಎಂದು ಕೇಳಿದರೆ, ಅದಕ್ಕೆ ಉತ್ತರ ಸಿಗೋದು ಗಾಯ ದೊಡ್ಡದಿದೆ ಎಂದು. ಅದಕ್ಕಾಗಿಯೇ ಅದಕ್ಕೊಂದು ಬೋರ್ಡ್ ಮಾಡಲಾಗಿದೆ. ರೈತರು ಮಾರುಕಟ್ಟೆ ಮೇಲೆ ಅವಲಂಬಿತರಾಗಿದ್ದಾರೆ ಎಂದರು. ರೈತರಿಗಾಗಿ ಸಮಯ ಚನ್ನಾಗಿ ಬಂದೇ ಬರುತ್ತೆ. ಸರಕಾರ ಅದಕ್ಕಾಗಿ ಕೆಲಸ ಮಾಡುತ್ತಿದೆ. ವಿಕಸಿತ ಭಾರತ ನಮ್ಮಗುರಿ. ನಾವು ಅದರಲ್ಲಿ ನಾವು ಬಹಳ ಬೇಗ ಪ್ರಗತಿ ಸಾಧಿಸಬೇಕು. ರೈತ ಅನ್ನದಾತ ಅಷ್ಟೇ ಅಲ್ಲ. ಅದಕ್ಕಿಂತ ದೊಡ್ಡ ಇದ್ದಾರೆ ಎಂದು ಹೇಳಬಯಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್, ಉಪರಾಷ್ಟ್ರಪತಿಯವರ ಪತ್ನಿ ಸುದೇಶ ಧನಕರ್, ಧಾರವಾಡ ಜಿಲ್ಲಾಧಿಕಾರಿ ದಿವ್ಯಪ್ರಭು, ಅಪರ ಜಿಲ್ಲಾಧಿಕಾರಿ ಗೀತಾ.ಸಿ.ಡಿ ಉಪಸ್ಥಿತರಿದ್ದರು.ಹಳೇ ವಿದ್ಯಾರ್ಥಿಗಳ ಸಂಘದ ಪದಾಧಿಕಾರಿಗಳು, ಕೃಷಿ ವಿವಿ ಉಪ ಕುಲಪತಿ.ಪಿ.ಎಲ್.ಪಾಟೀಲ್ ಮೊದಲಾದ ಗಣ್ಯರು ಉಪಸ್ಥಿತರಿದ್ದರು.

ಪಿಎಂ ಕಿಸಾನ್ ಬಹಳ ರೈತರಿಗೆ ಸಿಗುತ್ತಿದೆ. ಸಬ್ಸಿಡಿ ಕೊಟ್ಟರೆ ಅದು ರೈತರಿಗೆ ಸಿಗಲಿದೆ. ಈ ಸರಕಾರ ಗೊಬ್ಬರ ಮೇಲೆ ದರ ಕಡಿಮೆ ಮಾಡಿದೆ. 1350 ರೂಪಾಯಿಯಲ್ಲಿ ಡಿಎಪಿ ಸಿಗುತ್ತಿದೆ . ರೈತರು ಈ ನಿಧಿಯನ್ನು ಬಳಸಿಕೊಳ್ಳಲಿ. ದೇಶದ ಜನರ ಆದಾಯ 8 ರಷ್ಟು ಅಭಿವೃದ್ಧಿಯಾಗಿದೆ. ನಾವು ಈಗ 6 ಜಿ ತರುವ ಸ್ಥಳದಲ್ಲಿ ಇದ್ದೇವೆ. ಭಾರತ ಈಗ ಮಹತ್ವಪೂರ್ಣ ದೇಶ ಆಗಿದೆ. ನಾವು ಅದಕ್ಕೆ ನಮ್ಮ ಅನ್ನದಾತನಿಗೆ ಧನ್ಯವಾದ ಹೇಳುತ್ತಾ, ಸೇವೆ ಮಾಡಬೇಕು.

-ಜಗದೀಪ ಧನಕರ್ ಉಪರಾಷ್ಟ್ರಪತಿ

